ಸಂಪುಟ: 11 ಸಂಚಿಕೆ: 171 ಪುಟ: 4+2 ಬೆಲೆ : 3.00 ಮಂಗಳವಾರ, ಆಗಸ್ಟ್ 11, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 171 Pages : 4+2 Rate : 3.00 Tuesday, August 11, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

## ಶಿಷ್ಟಾಚಾರಕ್ಕೆ ಆದ್ಯತೆ | ಅಚ್ಚುಕಟ್ಟಾದ ವೇದಿಕೆ, ಆಕರ್ಷಕ ಪಥಸಂಚಲನಕ್ಕೆ ಸಿದ್ಧತೆ

# ಸ್ವಾತಂತ್ರ್ಯೋತ್ಸವಕ್ಕೆ ಜಿಲ್ಲಾಡಳಿತ ಸಜ್ಜು

> ಸ್ವಾತಂತ್ರ್ಯೋತ್ಸವದ ಪ್ರತಿಯೊಂದು ವ್ಯವಸ್ಥೆಯನ್ನೂ ಅಚ್ಚುಕಟ್ಟಾಗಿ ಕೈಗೊಳ್ಳಬೇಕು. ಶಿಷ್ಟಾಚಾರ ಪಾಲನೆಯೊಂದಿಗೆ ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ, ನಿಗದಿತ ಅವಧಿಯೊಳಗೆ ಸಿದ್ಧತೆ ಪೂರ್ಣಗೊಳಿಸಬೇಕು.
> **– ಸಿ.ಎನ್ ಶ್ರೀಧರ್,** ಜಿಲ್ಲಾಧಿಕಾರಿ, ಗದಗ

**ವಿಜಯಸಾಕ್ಷಿ ಸುದ್ದಿ, ಗದಗ**

ಆ.15ರಂದು ಜಿಲ್ಲಾಮಟ್ಟದಲ್ಲಿ ಆಚರಿಸಲಾಗುವ ಸ್ವಾತಂತ್ರ್ಯೋತ್ಸವವನ್ನು ಅರ್ಥಪೂರ್ಣ, ಶಿಸ್ತುಬದ್ಧ ಹಾಗೂ ವಿಜೃಂಭಣೆಯಿಂದ ಆಚರಿಸಲು ಜಿಲ್ಲಾಡಳಿತ ಸಿದ್ಧತೆ ಆರಂಭಿಸಿದೆ.



ಜಿಲ್ಲಾಡಳಿತ ಭವನದಲ್ಲಿ ಸೋಮವಾರ ಜಿಲ್ಲಾಧಿಕಾರಿ ಶ್ರೀಧರ್ ಅವರ ನೇತೃತ್ವದಲ್ಲಿ ನಡೆದ ಪೂರ್ವಸಿದ್ಧತಾ ಸಭೆಯಲ್ಲಿ ಕಾರ್ಯಕ್ರಮದ ವಿವಿಧ ವ್ಯವಸ್ಥೆಗಳ ಕುರಿತು ಚರ್ಚಿಸಿ, ಅಧಿಕಾರಿಗಳಿಗೆ ಅಗತ್ಯ ಸೂಚನೆ ನೀಡಲಾಯಿತು. ರಾಷ್ಟ್ರೀಯ ಹಬ್ಬದ ಆಚರಣೆಯಲ್ಲಿ ಶಿಷ್ಟಾಚಾರಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಗಣ್ಯರು, ಜನಪ್ರತಿನಿಧಿಗಳು ಹಾಗೂ ಅತಿಥಿಗಳಿಗೆ ಆಮಂತ್ರಣ ಪತ್ರಿಕೆಗಳನ್ನು ಸಕಾಲದಲ್ಲಿ ತಲುಪಿಸುವುದು, ಆಸನ ವ್ಯವಸ್ಥೆ ಸೇರಿದಂತೆ ಎಲ್ಲ ಸಿದ್ಧತೆಗಳನ್ನು ಅಚ್ಚುಕಟ್ಟಾಗಿ ಕೈಗೊಳ್ಳಬೇಕು ಎಂದು ಸಿ.ಎನ್ ಶ್ರೀಧರ್ ಸೂಚಿಸಿದರು.

ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಮುಖ್ಯ ಸಮಾರಂಭದ ವೇದಿಕೆಯನ್ನು ಆಕರ್ಷಕವಾಗಿ ಸಿದ್ಧಪಡಿಸುವುದರೊಂದಿಗೆ ಸಾರ್ವಜನಿಕರು, ವಿದ್ಯಾರ್ಥಿಗಳು ಹಾಗೂ ಅತಿಥಿಗಳಿಗೆ ಅಗತ್ಯ ಸೌಲಭ್ಯ ಕಲ್ಪಿಸಬೇಕು. ಕ್ರೀಡಾಂಗಣದ ಒಳ ಹಾಗೂ ಹೊರ ಆವರಣವನ್ನು ಸಂಪೂರ್ಣ ಸ್ವಚ್ಛಗೊಳಿಸುವಂತೆ ಸೂಚಿಸಲಾಯಿತು.

### ಮಕ್ಕಳ ಸುರಕ್ಷತೆಗೆ ಆದ್ಯತೆ

ಸ್ವಾತಂತ್ರ್ಯೋತ್ಸವಕ್ಕೆ ವಿವಿಧ ಶಾಲೆಗಳಿಂದ ಆಗಮಿಸುವ ವಿದ್ಯಾರ್ಥಿಗಳನ್ನು ಸುರಕ್ಷಿತವಾಗಿ ಕ್ರೀಡಾಂಗಣಕ್ಕೆ ಕರೆತಂದು, ಕಾರ್ಯಕ್ರಮ ಮುಗಿದ ಬಳಿಕ ಯಾವುದೇ ತೊಂದರೆಯಾಗದಂತೆ ಮರಳಿ ಕಳುಹಿಸುವ ಕುರಿತು ವಿಶೇಷ ಚರ್ಚೆ ನಡೆಯಿತು. ಶಿಕ್ಷಣ, ಪೊಲೀಸ್ ಹಾಗೂ ಸಂಬಂಧಿತ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಸಾರಿಗೆ, ಕುಡಿಯುವ ನೀರು ಸೇರಿದಂತೆ ಅಗತ್ಯ ಸೌಲಭ್ಯ ಕಲ್ಪಿಸಬೇಕು ಎಂದು ಸೂಚಿಸಲಾಯಿತು.

### ಪಥಸಂಚಲನಕ್ಕೆ ಪೂರ್ವಾಭ್ಯಾಸ

ಸಮಾರಂಭದ ಪ್ರಮುಖ ಆಕರ್ಷಣೆಯಾದ ಪಥಸಂಚಲನವನ್ನು ಶಿಸ್ತುಬದ್ಧವಾಗಿ ಹಾಗೂ ಆಕರ್ಷಕವಾಗಿ ಆಯೋಜಿಸಲು ಪೂರ್ವಾಭ್ಯಾಸ ನಡೆಸುವಂತೆ ತಿಳಿಸಲಾಯಿತು. ಪೊಲೀಸ್ ಇಲಾಖೆ, ಎನ್‌ಸಿಸಿ, ಎನ್‌ಎಸ್‌ಎಸ್, ಸ್ಕೌಟ್ಸ್ ಮತ್ತು ಗೈಡ್ಸ್, ಸೇವಾದಳ ಹಾಗೂ ಶಾಲಾ ಮಕ್ಕಳು ಪಥಸಂಚಲನದಲ್ಲಿ ಭಾಗವಹಿಸಲಿದ್ದಾರೆ.

ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸುವ ಕಾರ್ಯಕ್ರಮ ಹಾಗೂ ಸಚಿವರ ಸ್ವಾತಂತ್ರ್ಯೋತ್ಸವ ಸಂದೇಶದ ಸಿದ್ಧತೆ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಜಿಲ್ಲೆಯ ಅಭಿವೃದ್ಧಿ, ಜನಪರ ಯೋಜನೆಗಳು, ಸ್ವಾತಂತ್ರ್ಯ ಹೋರಾಟದ ಮೌಲ್ಯಗಳು, ರಾಷ್ಟ್ರೀಯ ಏಕತೆ ಮತ್ತು ದೇಶಭಕ್ತಿಯ ಸಂದೇಶ ಒಳಗೊಂಡಂತೆ ಭಾಷಣ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಸಹಾಯಕ ಆಯುಕ್ತ ಗಂಗಪ್ಪ ಎಂ. ಸೇರಿದಂತೆ ವಿವಿಧ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

**ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.**

## ಎರಡು ತಿಂಗಳ ಪಡಿತರ ವಿತರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ಆಗಸ್ಟ್ 2026ರಲ್ಲೇ ಆಗಸ್ಟ್ ಮತ್ತು ಸೆಪ್ಟೆಂಬರ್ ತಿಂಗಳ ಪಡಿತರ ಆಹಾರಧಾನ್ಯವನ್ನು ಒಟ್ಟಿಗೆ ವಿತರಿಸಲಾಗುತ್ತಿದೆ. ಜಿಲ್ಲೆಯ 365 ನ್ಯಾಯಬೆಲೆ ಅಂಗಡಿಗಳ ಮೂಲಕ ಕೇಂದ್ರ ವ್ಯಾಪ್ತಿಯ ಎನ್‌ಎಫ್‌ಎಸ್‌ಎ ವರ್ಗದ ಫಲಾನುಭವಿಗಳಿಗೆ ಅಕ್ಕಿ ಹಾಗೂ ಜೋಳವನ್ನು ವಿತರಿಸಲು ಜಿಲ್ಲಾಡಳಿತ ಕ್ರಮ ಕೈಗೊಂಡಿದೆ. ಅಂತ್ಯೋದಯ ಪಡಿತರ ಚೀಟಿಯ ಪ್ರತಿ ಕಾರ್ಡ್‌ಗೆ ಆಗಸ್ಟ್ ತಿಂಗಳಿಗೆ 21 ಕೆ.ಜಿ. ಜೋಳ ಹಾಗೂ 14 ಕೆ.ಜಿ. ಅಕ್ಕಿ ಮತ್ತು ಸೆಪ್ಟೆಂಬರ್ ತಿಂಗಳಿಗೂ 21 ಕೆ.ಜಿ. ಜೋಳ ಹಾಗೂ 14 ಕೆ.ಜಿ. ಅಕ್ಕಿ ವಿತರಿಸಲಾಗುತ್ತದೆ. ಹೀಗಾಗಿ ಎರಡು ತಿಂಗಳಿಗೆ ಒಟ್ಟು 28 ಕೆ.ಜಿ. ಅಕ್ಕಿ ಹಾಗೂ 42 ಕೆ.ಜಿ. ಜೋಳ ಸೇರಿದಂತೆ 70 ಕೆ.ಜಿ. ಆಹಾರಧಾನ್ಯ ದೊರೆಯಲಿದೆ. ಆಗಸ್ಟ್ ತಿಂಗಳಲ್ಲೇ ಎರಡು ತಿಂಗಳ ಪಡಿತರ ವಿತರಣೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಅರ್ಹ ಫಲಾನುಭವಿಗಳು ನ್ಯಾಯಬೆಲೆ ಅಂಗಡಿಗಳಿಗೆ ತೆರಳಿ ನಿಗದಿತ ಪ್ರಮಾಣದ ಆಹಾರಧಾನ್ಯ ಪಡೆದುಕೊಳ್ಳುವಂತೆ ಜಿಲ್ಲಾಡಳಿತ ಮನವಿ ಮಾಡಿದೆ.

## 4.5 ಲಕ್ಷ ಹೊರಗುತ್ತಿಗೆ ನೌಕರರ ಬದುಕು ಪರಿಗಣಿಸಿ ಪರಿಷ್ಕೃತ ವೇತನ ಕಡ್ಡಾಯಗೊಳಿಸಿ

# ಕನಿಷ್ಠ ವೇತನ ಜಾರಿಗೆ ಆಗ್ರಹಿಸಿ ಪ್ರತಿಭಟನೆ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸುಮಾರು 4.5 ಲಕ್ಷ ಹೊರಗುತ್ತಿಗೆ ನೌಕರರ ಜೀವನಮಟ್ಟ ಹಾಗೂ ಹೆಚ್ಚುತ್ತಿರುವ ಜೀವನ ವೆಚ್ಚವನ್ನು ಪರಿಗಣಿಸಿ ಪರಿಷ್ಕೃತ ಕನಿಷ್ಠ ವೇತನವನ್ನು ಕಡ್ಡಾಯವಾಗಿ ಜಾರಿಗೆ ತರಬೇಕು ಎಂದು ಸರ್ಕಾರಿ ಹೊರಗುತ್ತಿಗೆ ನೌಕರರ ಸಂಘದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಹುಸೇನಸಾಬ ಕನಕವಾಡ ಆಗ್ರಹಿಸಿದರು. ಕನಿಷ್ಠ ವೇತನ ಪರಿಷ್ಕರಣೆ ಕುರಿತು 2026ರ ಮೇ 22ರಂದು ಹೊರಡಿಸಿರುವ ಅಧಿಸೂಚನೆಯನ್ನು ಕಡ್ಡಾಯವಾಗಿ ಜಾರಿಗೆ ತರಬೇಕು ಎಂದು ಒತ್ತಾಯಿಸಿ ಸರ್ಕಾರಿ ಹೊರಗುತ್ತಿಗೆ ನೌಕರರ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ಪ್ರತಿಭಟನೆ ನಡೆಸಲಾಯಿತು. ಬಳಿಕ ಗದಗ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಲಾಯಿತು. ಕಾರ್ಮಿಕ ಇಲಾಖೆಯಿಂದ ಕನಿಷ್ಠ ವೇತನ ಪರಿಷ್ಕರಣೆಗೆ ಸಂಬಂಧಿಸಿದಂತೆ ಹೊರಡಿಸಿರುವ ಆದೇಶ ಹಾಗೂ ಕರಡು ಅಧಿಸೂಚನೆಯಲ್ಲಿ ಅಕುಶಲ, ಅರೆಕುಶಲ, ಕುಶಲ ಹಾಗೂ ಅತ್ಯುನ್ನತ ಕುಶಲ ನೌಕರರ ವೇತನ ವರ್ಗೀಕರಣವನ್ನು ಉಲ್ಲೇಖಿಸಲಾಗಿದೆ. ಹೀಗಾಗಿ ಕರಡು ಹಾಗೂ ಪ್ರಸ್ತಾವಿತ ಆದೇಶವನ್ನು ವಿಳಂಬವಿಲ್ಲದೆ ಜಾರಿಗೊಳಿಸಿ ನೌಕರರಿಗೆ ನ್ಯಾಯಯುತ ವೇತನ ದೊರೆಯುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಹುಸೇನಸಾಬ ಕನಕವಾಡ ಒತ್ತಾಯಿಸಿದರು.

ಸರ್ಕಾರಿ ಇಲಾಖೆಗಳು, ನಿಗಮಗಳು, ಮಂಡಳಿಗಳು, ಸ್ಥಳೀಯ ಸಂಸ್ಥೆಗಳು ಹಾಗೂ ಇತರೆ ಸರ್ಕಾರಿ ಸಂಸ್ಥೆಗಳಲ್ಲಿ ಗುತ್ತಿಗೆ ಮತ್ತು ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರಿಗೂ ಪರಿಷ್ಕೃತ ಕನಿಷ್ಠ ವೇತನ ಅನ್ವಯವಾಗುವಂತೆ ಸ್ಪಷ್ಟ ಆದೇಶ ಹೊರಡಿಸಬೇಕು. ಈ ಕುರಿತು ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಅಗತ್ಯ ನಿರ್ದೇಶನ ನೀಡುವಂತೆ ಮುಖ್ಯಮಂತ್ರಿಗಳಿಗೆ ಸಲ್ಲಿಸಿದ ಮನವಿಯಲ್ಲಿ ಆಗ್ರಹಿಸಲಾಗಿದೆ. ಪ್ರತಿಭಟನೆಯಲ್ಲಿ ಸಂಘದ ರಾಜ್ಯ ಸಮಿತಿ ಸದಸ್ಯೆ ಅಕ್ಕಮಹಾದೇವಿ ದಮ್ಮೂರ, ಜಿಲ್ಲಾ ಉಪಾಧ್ಯಕ್ಷ ಕೃಷ್ಣಪ್ಪ ಪೂಜಾರ, ಪ್ರಧಾನ ಕಾರ್ಯದರ್ಶಿ ಸಿದ್ದಪ್ಪ ವಾಲಿಕಾರ, ಕಾರ್ಯದರ್ಶಿ ರಾಮಣ್ಣ ದೊಡ್ಡಮನಿ, ಮಲ್ಲಪ್ಪ ಭಾವಿಮನಿ, ಜಾವೇದ ನದಾಫ್, ಪ್ರವೀಣ ಶಿಗ್ಲಿಯವರ, ಮಂಜುನಾಥ ಹರ್ತಿ, ಉಮೇಶ ನೂಲ್ವಿ ಸೇರಿದಂತೆ ವಿವಿಧ ಇಲಾಖೆಗಳ ಗುತ್ತಿಗೆ, ನೌಕರರು ಉಪಸ್ಥಿತರಿದ್ದರು.

## ಯೋಜನೆಗಳ ಅನುಷ್ಠಾನದಲ್ಲಿ ಶೇ.100 ಪ್ರಗತಿ ಸಾಧಿಸಿ: ಅಶೋಕ ಮಂದಾಲಿ

# ಅರ್ಹರಿಗೆ ಪಂಚ ಗ್ಯಾರಂಟಿ ಸೌಲಭ್ಯ ಸಕಾಲಕ್ಕೆ ತಲುಪಲಿ




**ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ತಲುಪಬೇಕು. ಸೌಲಭ್ಯ ವಿತರಣೆಯಲ್ಲಿ ಯಾವುದೇ ಕಾರಣಕ್ಕೂ ವಿಳಂಬವಾಗಬಾರದು ಎಂದು ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ನಡೆದ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಂಚ ಗ್ಯಾರಂಟಿ ಯೋಜನೆಗಳು ಬಡಜನರನ್ನು ಆರ್ಥಿಕವಾಗಿ ಸಬಲಗೊಳಿಸುವ ಉದ್ದೇಶ ಹೊಂದಿವೆ. ಯಾವುದೇ ಅರ್ಹ ಫಲಾನುಭವಿ ಸೌಲಭ್ಯದಿಂದ ವಂಚಿತನಾಗದಂತೆ ಅಧಿಕಾರಿಗಳು ಕ್ರಿಯಾಶೀಲತೆ ಹಾಗೂ ಶಿಸ್ತಿನಿಂದ ಕಾರ್ಯನಿರ್ವಹಿಸಬೇಕು. ಯೋಜನೆಗಳ ಅನುಷ್ಠಾನದಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸಬೇಕು ಎಂದು ಹೇಳಿದರು.

ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯ ಕೃಷ್ಣಗೌಡ ಎಚ್. ಪಾಟೀಲ ಮಾತನಾಡಿ, ಗೃಹಲಕ್ಷ್ಮೀ ಯೋಜನೆಯಿಂದ ಯಾವುದೇ ಅರ್ಹ ಮಹಿಳೆ ವಂಚಿತರಾಗದಂತೆ ನೋಡಿಕೊಳ್ಳಬೇಕು. ಮರಣ ಹೊಂದಿದವರ ಖಾತೆಗೆ ಹಣ ಜಮೆಯಾಗುವ ಪ್ರಕರಣಗಳನ್ನು ತಡೆಗಟ್ಟಬೇಕು. ಯುವನಿಧಿ ಯೋಜನೆಯಿಂದ ಅರ್ಹರು ವಂಚಿತರಾಗದಂತೆ ಕ್ರಮ ಕೈಗೊಳ್ಳಬೇಕು. ಅನ್ನಭಾಗ್ಯ ಯೋಜನೆಯ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಸೂಚಿಸಿದರು.

> **ಪಂಚ ಗ್ಯಾರಂಟಿ ಯೋಜನೆಗಳು ಬಡಜನರ ಆರ್ಥಿಕ ಸಬಲೀಕರಣಕ್ಕಾಗಿ ಜಾರಿಯಾಗಿವೆ. ಯಾವುದೇ ಅರ್ಹ ಫಲಾನುಭವಿ ಸೌಲಭ್ಯದಿಂದ ವಂಚಿತರಾಗದಂತೆ ಅಧಿಕಾರಿಗಳು ಪ್ರಾಮಾಣಿಕತೆ ಹಾಗೂ ಶಿಸ್ತಿನಿಂದ ಕಾರ್ಯನಿರ್ವಹಿಸಿ, ಅನುಷ್ಠಾನದಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸಬೇಕು.**
> **– ಅಶೋಕ ಮಂದಾಲಿ,** ಅಧ್ಯಕ್ಷರು, ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ

ಸಭೆಯಲ್ಲಿ ಅಧಿಕಾರಿಗಳು ನೀಡಿದ ಮಾಹಿತಿಯಂತೆ, ಯುವನಿಧಿ ಯೋಜನೆಯಡಿ ಜೂನ್ 2026ರವರೆಗೆ ಗದಗ ತಾಲೂಕಿನಲ್ಲಿ 3,112 ಅಭ್ಯರ್ಥಿಗಳು ನೋಂದಣಿಯಾಗಿದ್ದು, 2,819 ಅರ್ಹ ಫಲಾನುಭವಿಗಳಿಗೆ ಡಿಬಿಟಿ ಮೂಲಕ ಹಣ ವರ್ಗಾವಣೆಯಾಗಿದೆ. ಗೃಹಲಕ್ಷ್ಮೀ ಯೋಜನೆಯಡಿ ಏಪ್ರಿಲ್ 2026ರವರೆಗೆ 84,037 ಅರ್ಜಿಗಳು ನೋಂದಣಿಯಾಗಿದ್ದು, 75,133 ಫಲಾನುಭವಿಗಳಿಗೆ ಡಿಬಿಟಿ ಮೂಲಕ ಹಣ ಪಾವತಿಸಲಾಗಿದೆ. ಮೇ ತಿಂಗಳ ಹಣ ಫಲಾನುಭವಿಗಳ ಖಾತೆಗೆ ಜಮೆಯಾಗುತ್ತಿದೆ.

ಗೃಹಜ್ಯೋತಿ ಯೋಜನೆಯಡಿ ಜುಲೈ 31ರವರೆಗೆ ಗದಗ ಶಹರದಲ್ಲಿ ಅರ್ಹ 46,484 ಸ್ಥಾವರಗಳ ಪೈಕಿ 46,260 ನೋಂದಣಿಯಾಗಿದ್ದು, ಶೇ.99.52ರಷ್ಟು ಪ್ರಗತಿ ಸಾಧಿಸಲಾಗಿದೆ. ಗದಗ ಗ್ರಾಮೀಣ ಉಪವಿಭಾಗದಲ್ಲಿ ಅರ್ಹ 53,324 ಸ್ಥಾವರಗಳ ಪೈಕಿ 53,110 ನೋಂದಣಿಯಾಗಿದ್ದು, ಶೇ.99.60ರಷ್ಟು ಪ್ರಗತಿ ಸಾಧಿಸಲಾಗಿದೆ.

ಶಕ್ತಿ ಯೋಜನೆಯಡಿ 2023ರ ಜೂನ್ 11ರಿಂದ 2026ರ ಆಗಸ್ಟ್ 3ರವರೆಗೆ ಗದಗ ಘಟಕದಲ್ಲಿ ಮಹಿಳಾ ಪ್ರಯಾಣಿಕರಿಂದ ₹10,625.33 ಲಕ್ಷ ಹಾಗೂ ಬೆಟಗೇರಿ ಘಟಕದಲ್ಲಿ ₹6,297.67 ಲಕ್ಷ ಆದಾಯವಾಗಿದೆ.

ಅನ್ನಭಾಗ್ಯ ಯೋಜನೆಯಡಿ ಜುಲೈ 2026ರಲ್ಲಿ ಗದಗ ಶಹರದ 32,699 ಪಡಿತರ ಕಾರ್ಡುದಾರರಿಗೆ ಕೇಂದ್ರದ ಎನ್‌ಎಸ್‌ಎಫ್‌ಎ ಅಡಿ 2,250.98 ಕ್ವಿಂಟಲ್ ಅಕ್ಕಿ ಹಾಗೂ ಗ್ರಾಮೀಣ ಭಾಗದ 48,483 ಕಾರ್ಡುದಾರರಿಗೆ 3,578.82 ಕ್ವಿಂಟಲ್ ಅಕ್ಕಿ ಹಂಚಿಕೆ ಮಾಡಲಾಗಿದೆ. ರಾಜ್ಯ ಸರ್ಕಾರದ ಅನ್ನಭಾಗ್ಯ ಅಕ್ಕಿ ಹಂಚಿಕೆ ಯೋಜನೆಯಡಿ ಗದಗ ಶಹರದ 32,699 ಕಾರ್ಡುದಾರರಿಗೆ 5,360.95 ಕ್ವಿಂಟಲ್ ಹಾಗೂ ಗ್ರಾಮೀಣ ಭಾಗದ 48,483 ಕಾರ್ಡುದಾರರಿಗೆ 7,521.35 ಕ್ವಿಂಟಲ್ ಅಕ್ಕಿ ಹಂಚಿಕೆ ಮಾಡಲಾಗಿದೆ.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ನೀಲಮ್ಮ ಬೋಳನವರ, ತಾಲೂಕು ಸಮಿತಿ ಸದಸ್ಯರಾದ ಮೀನಾಕ್ಷಿ ಬೆನಕಣ್ಣವರ, ದಯಾನಂದ ಪವಾರ, ಸಂಗು ಕರಕಲಮಟ್ಟಿ, ಎನ್.ಬಿ. ದೇಸಾಯಿ, ಸಂಗಮೇಶ ಹಾದಿಮನಿ, ರಮೇಶ ಹೊನ್ನಿನಾಯ್ಕರ, ದೇವರಡ್ಡಿ ತಿರ್ಲಾಪುರ, ಮಲ್ಲಪ್ಪ ದಂಡಿನ, ಗಣೇಶ ಸಿಂಗ್ ಮಿಟಾಡೆ, ಮಲ್ಲಪ್ಪ ಬಾರಕೇರ, ಭಾಷಾ ಮಲ್ಲಸಮುದ್ರ, ಸಾವಿತ್ರಿ ಹೂಗಾರ, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಡಾ. ಎಚ್.ಎಸ್. ಜಿನಗ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಪ್ರತಿ ಎಕರೆಗೆ ₹50 ಸಾವಿರ ಪರಿಹಾರ, ಕೃಷಿ ಸಾಲ ಮನ್ನಾ ಸೇರಿದಂತೆ ವಿವಿಧ ಬೇಡಿಕೆಗಳಿಗೆ ರೈತರ ಆಗ್ರಹ

# ಗದಗ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಬೆಳೆಗಳು ಕೈಕೊಟ್ಟು ರೈತರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಘೋಷಿಸಬೇಕು ಎಂದು ರೈತ ಮುಖಂಡ ಶಂಕರಗೌಡ ಜಯನಗೌಡ್ರ ಒತ್ತಾಯಿಸಿದರು.



ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಸೋಮವಾರ ನಗರದ ಕಿತ್ತೂರು ರಾಣಿ ಚನ್ನಮ್ಮ ವೃತ್ತದಿಂದ ಜಿಲ್ಲಾಡಳಿತ ಭವನದವರೆಗೆ ಪಾದಯಾತ್ರೆ ನಡೆಸಿದ ರೈತರು, ವಿವಿಧ ಬೇಡಿಕೆಗಳನ್ನೊಳಗೊಂಡ ಮನವಿಯನ್ನು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರಿಗೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಂಕರಗೌಡ ಜಯನಗೌಡ್ರ, ಜಿಲ್ಲೆಯಲ್ಲಿ ಸಮರ್ಪಕ ಮಳೆಯಾಗದೆ ಬೆಳೆಗಳು ನಷ್ಟವಾಗಿವೆ. ಬಿತ್ತನೆ, ಬೀಜ, ಗೊಬ್ಬರ ಸೇರಿದಂತೆ ಕೃಷಿ ಚಟುವಟಿಕೆಗಳಿಗೆ ಹಣ ಖರ್ಚು ಮಾಡಿರುವ ರೈತರು ಇದೀಗ ಬೆಳೆ ನಷ್ಟದಿಂದ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಆದ್ದರಿಂದ ಬರಪೀಡಿತ ಪ್ರದೇಶದ ನಿಯಮದಂತೆ ಪ್ರತಿ ಎಕರೆಗೆ ₹50 ಸಾವಿರ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಬರ ಪರಿಸ್ಥಿತಿಯಿಂದ ಜಾನುವಾರುಗಳಿಗೆ ಮೇವಿನ ಕೊರತೆ ಎದುರಾಗುವ ಸಾಧ್ಯತೆ ಇರುವುದರಿಂದ ಪ್ರತಿ ಹೋಬಳಿ ಮಟ್ಟದಲ್ಲಿ ಗೋಶಾಲೆ ಹಾಗೂ ಮೇವು ಬ್ಯಾಂಕ್ ತೆರೆಯಬೇಕು. ರೈತರು ಕೃಷಿ ಚಟುವಟಿಕೆಗಳಿಗಾಗಿ ರಾಷ್ಟ್ರೀಕೃತ ಹಾಗೂ ಸಹಕಾರಿ ಬ್ಯಾಂಕ್‌ಗಳಲ್ಲಿ ಪಡೆದಿರುವ ಬೆಳೆ ಸಾಲವನ್ನು ಬರಗಾಲದ ಹಿನ್ನೆಲೆಯಲ್ಲಿ ಮನ್ನಾ ಮಾಡಬೇಕು ಎಂದು ಒತ್ತಾಯಿಸಿದರು.

202526ನೇ ಸಾಲಿನ ಬೆಳೆ ವಿಮೆ ಯೋಜನೆಯಡಿ ಜಿಲ್ಲೆಯ ಹಲವು ರೈತರು ವಿಮೆ ಪಾವತಿಸಿದ್ದರೂ, ತಾಂತ್ರಿಕ ಹಾಗೂ ಇತರೆ ಕಾರಣಗಳಿಂದ ಕೆಲವರಿಗೆ ಸಮರ್ಪಕ ಪರಿಹಾರ ದೊರೆತಿಲ್ಲ. ಈ ಕುರಿತು ಕೂಡಲೇ ಪರಿಶೀಲನೆ ನಡೆಸಿ, ಅರ್ಹ ರೈತರಿಗೆ ಸಂಪೂರ್ಣ ಬೆಳೆ ವಿಮೆ ಪರಿಹಾರ ಬಿಡುಗಡೆ ಮಾಡಬೇಕು. ಬೆಳೆ ವಿಮೆಗೆ ಸಂಬಂಧಿಸಿದ ಎಲ್ಲ ಅರ್ಜಿಗಳನ್ನು ಪುನರ್‌ಪರಿಶೀಲಿಸಿ ಅರ್ಹರಿಗೆ ನ್ಯಾಯ ದೊರಕಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

1978ರಿಂದ ಅರಣ್ಯ ಒತ್ತುವರಿದಾರರು ಹಾಗೂ ಬಗರಹುಕುಂ ಸಾಗುವಳಿದಾರರಿಗೆ ಹಕ್ಕುಪತ್ರ ದೊರೆಯದೆ ಇರುವ ಪ್ರಕರಣಗಳನ್ನು ತ್ವರಿತವಾಗಿ ಪರಿಶೀಲಿಸಿ, ಅರ್ಹರಿಗೆ ಅರಣ್ಯ ಹಕ್ಕುಪತ್ರ ಹಾಗೂ ಪಟ್ಟಾ ನೀಡಬೇಕು. ಅರಣ್ಯ ಒತ್ತುವರಿ ಪ್ರಕರಣಗಳಲ್ಲಿ ರೈತರ ವಿರುದ್ಧ ದಾಖಲಾಗಿರುವ ಪ್ರಕರಣಗಳು ಹಾಗೂ ಎಫ್‌ಐಆರ್‌ಗಳನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ರೇಷ್ಮೆ ಬೆಳೆಗಾರರಿಗೆ ಸರ್ಕಾರದಿಂದ ದೊರೆಯಬೇಕಾದ ಸಹಾಯಧನ ಸಮರ್ಪಕವಾಗಿ ಲಭ್ಯವಾಗುತ್ತಿಲ್ಲ. ಅಧಿಕಾರಿಗಳು ಈ ಕುರಿತು ಪರಿಶೀಲನೆ ನಡೆಸಿ ಅರ್ಹ ರೇಷ್ಮೆ ಬೆಳೆಗಾರರಿಗೆ ಕೂಡಲೇ ಸಹಾಯಧನ ಒದಗಿಸಬೇಕು ಎಂದು ಆಗ್ರಹಿಸಿದರು.

## 18 ವರ್ಷಗಳ ಬಳಿಕ ಅದ್ದೂರಿ ಜಾತ್ರೆ; ಆ.26ರಂದು ಮೂರ್ತಿ ಪ್ರತಿಷ್ಠಾಪನೆ

# ಆ.18ರಿಂದ ದ್ಯಾಮವ್ವ-ದುರಗಮ್ಮ ಹರಿಜಾತ್ರೋತ್ಸವ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದ ಒಕ್ಕಲಗೇರಿ ಓಣಿಯ ಗ್ರಾಮದೇವತೆಗಳಾದ ದ್ಯಾಮವ್ವ ಹಾಗೂ ದುರಗಮ್ಮ ದೇವಿಯರ ಹರಿಜಾತ್ರೋತ್ಸವ ಆ.18ರಿಂದ ಅದ್ದೂರಿಯಾಗಿ ನಡೆಯಲಿದೆ ಎಂದು ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಕೊಟ್ರಪ್ಪ ಕಮತರ ಹೇಳಿದರು.

ನಗರದ ದ್ಯಾಮವ್ವ ದೇವಿ ದೇವಸ್ಥಾನದ ಆವರಣದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿ 12 ವರ್ಷಕ್ಕೊಮ್ಮೆ ಜಾತ್ರಾ ಮಹೋತ್ಸವ ನಡೆಯುತ್ತದೆ. 2020ರಲ್ಲಿ ಜಾತ್ರೆ ನಡೆಯಬೇಕಿತ್ತಾದರೂ ಕೊರೊನಾ ಕಾರಣದಿಂದ ಸಾಧ್ಯವಾಗಿರಲಿಲ್ಲ. ಇದೀಗ ಆರು ವರ್ಷ ವಿಳಂಬವಾಗಿ, 18 ವರ್ಷಗಳ ಬಳಿಕ ಜಾತ್ರೆ ನಡೆಯುತ್ತಿದೆ ಎಂದರು.

ಆ.18ರಂದು ದ್ಯಾಮವ್ವ ಹಾಗೂ ದುರಗಮ್ಮ ದೇವಿಯರ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮ ನಡೆಯಲಿದ್ದು, ಜಾತ್ರೆಯ ಅಂಗವಾಗಿ ಪ್ರತಿದಿನ ಭಕ್ತರಿಗೆ ಮಹಾ ಅನ್ನಸಂತರ್ಪಣೆ ಆಯೋಜಿಸಲಾಗಿದೆ. ಆ.25ರಂದು ಉಡಿ ತುಂಬುವ ಕಾರ್ಯಕ್ರಮ ನಡೆಯಲಿದ್ದು, ನಗರದ ವಿವಿಧ ದೇವಸ್ಥಾನಗಳಿಗೆ ಉಡಿ ತುಂಬುವ ಹಾಗೂ ಕಾಯಿ ಒಡೆಯುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಆ.26ರಂದು ಬೆಳಗ್ಗೆ 11ಕ್ಕೆ ಸಕಲ ಮಂಗಲವಾದ್ಯಗಳೊಂದಿಗೆ ಒಕ್ಕಲಗೇರಿಯ ದ್ಯಾಮವ್ವನ ಕಟ್ಟೆಯಿಂದ ಜೋಡು ಮಾರುತಿ ದೇವಸ್ಥಾನದ ಬಳಿಯ ಕಿಲ್ಲಾ ಓಣಿಯಲ್ಲಿರುವ ದ್ಯಾಮವ್ವ ಹಾಗೂ ದುರಗಮ್ಮ ದೇವಿಯ ದೇವಸ್ಥಾನಕ್ಕೆ ದೇವಿಯರನ್ನು ಕರೆತಂದು ಮೂರ್ತಿ ಪ್ರತಿಷ್ಠಾಪಿಸಲಾಗುವುದು. ಆ.28ರಂದು ಬೆಳಗ್ಗೆ 7ಕ್ಕೆ ದೇವಿಯರ ಗುಡಿಯಲ್ಲಿ ಹೋಮ ನಡೆಯಲಿದ್ದು, ಮಧ್ಯಾಹ್ನ ಅನ್ನಸಂತರ್ಪಣೆ ಹಾಗೂ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ ಎಂದರು.

> **18 ವರ್ಷಗಳ ಬಳಿಕ ನಡೆಯುತ್ತಿರುವ ಈ ಜಾತ್ರಾ ಮಹೋತ್ಸವದಲ್ಲಿ ಅವಳಿ ನಗರದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದೇವಿಯರ ಆಶೀರ್ವಾದ ಪಡೆಯಬೇಕು.**
> **– ಕೊಟ್ರಪ್ಪ ಕಮತರ,** ಅಧ್ಯಕ್ಷರು, ಜಾತ್ರಾ ಮಹೋತ್ಸವ ಸಮಿತಿ

ಜಾತ್ರಾ ಸಮಿತಿ ಸಂಘಟನಾ ಕಾರ್ಯದರ್ಶಿ ರಾಜು ಖಾನಪ್ಪನವರ ಮಾತನಾಡಿ, ದ್ಯಾಮವ್ವ ಹಾಗೂ ದುರಗಮ್ಮ ದೇವಿಯರ ಜಾತ್ರೆಗೆ ಗದಗ-ಬೆಟಗೇರಿ ಅವಳಿ ನಗರದ ಎಲ್ಲ ಮಹಿಳೆಯರು ಆಗಮಿಸಬೇಕು. ವಿಶೇಷವಾಗಿ ಗಂಡನ ಮನೆಗೆ ತೆರಳಿರುವ ಮುತ್ತೈದೆಯರಿಗೆ ಸೀರೆ ಉಡಿಸುವ ಕಾರ್ಯಕ್ರಮವಿದ್ದು, ಎಲ್ಲರೂ ತವರು ಮನೆಯಾದ ಗದಗ ನಗರಕ್ಕೆ ಆಗಮಿಸಿ ದೇವಿಯ ಆಶೀರ್ವಾದ ಪಡೆಯಬೇಕು ಎಂದು ಮನವಿ ಮಾಡಿದರು.

ಜಾತ್ರಾ ಸಮಿತಿ ಕೋಶಾಧ್ಯಕ್ಷ ವಿಜಯಕುಮಾರ ಗಡ್ಡಿ ಮಾತನಾಡಿ, ದ್ಯಾಮವ್ವ ಹಾಗೂ ದುರಗಮ್ಮ ದೇವಿಯರು ಶಕ್ತಿ ದೇವತೆಗಳಾಗಿದ್ದು, ಭಕ್ತರ ಬೇಡಿಕೆಗಳನ್ನು ಈಡೇರಿಸುವ ಕರುಣಾಮಯಿಗಳಾಗಿದ್ದಾರೆ. ಜಾತ್ರಾ ಮಹೋತ್ಸವಕ್ಕೆ ಸಕಲ ಸದ್ಭಕ್ತರು ಆಗಮಿಸಿ ತನು-ಮನ-ಧನದಿಂದ ಸಹಾಯ, ಸಹಕಾರ ನೀಡಬೇಕು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕಾರ್ಯಾಧ್ಯಕ್ಷ ಫಕ್ಕಿರಪ್ಪ ಹೆಬಸೂರ, ನಿಂಗಪ್ಪ ಪಡಗದ, ರಾಮಣ್ಣ ಪಲ್ಲದಡ್ಡಿ, ಶಿವಣ್ಣ ಕತ್ತಿ, ನಾಗಪ್ಪ ಗುಗ್ಗರಿ, ವೀರಣ್ಣ ಮೇಟಿ, ಶ್ರೀಧರ್ ವಜ್ರಬಂಡಿ ಉಪಸ್ಥಿತರಿದ್ದರು.

## ಗದಗ ಉತ್ಸವ-2026 ಯಶಸ್ಸಿಗೆ ಉಪಸಮಿತಿಗಳ ರಚನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಗ್ರಾಮೀಣ ಹಾಗೂ ಸಣ್ಣ ಉದ್ಯಮ ವಿಭಾಗ ಮತ್ತು ಜಿಲ್ಲಾ ಪಂಚಾಯಿತಿ ಆಶ್ರಯದಲ್ಲಿ ಗದಗ ಉತ್ಸವ-2026ಟಿ ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳ ಆ.14ರಿಂದ 18ರವರೆಗೆ ಗದಗದ ಸ್ವಾಮಿ ವಿವೇಕಾನಂದ ಸಭಾಭವನ ಹಾಗೂ ಕೆ.ಎಚ್. ಪಾಟೀಲ ಸಭಾಭವನದಲ್ಲಿ ನಡೆಯಲಿದೆ.

ಉತ್ಸವವನ್ನು ಯಶಸ್ವಿಯಾಗಿ ಆಯೋಜಿಸಲು ವಿವಿಧ ಉಪಸಮಿತಿಗಳನ್ನು ರಚಿಸಲಾಗಿದೆ. ಹಣಕಾಸು ಸಮಿತಿಗೆ ಈಶಣ್ಣ ಮುನವಳ್ಳಿ ಚೇರ್ಮನ್, ರಾಜಣ್ಣ ಮಲ್ಲಾಡದ ಕೋ-ಚೇರ್ಮನ್; ಸ್ವಾಗತ ಸಮಿತಿಗೆ ಶಿವರಡ್ಡೆಪ್ಪ ರಡ್ಡೇರ ಚೇರ್ಮನ್, ಶಿವಾನಂದಯ್ಯ ಹಿರೇಮಠ ಕೋ-ಚೇರ್ಮನ್, ಮಾರುಕಟ್ಟೆ ಸಮಿತಿಗೆ ರಾಜಶೇಖರ ವ್ಹಿ.ಎಂ. ಚೇರ್ಮನ್, ಪರಶುರಾಮ ಹಬೀಬ ಕೋ-ಚೇರ್ಮನ್ ಆಗಿ ನೇಮಕಗೊಂಡಿದ್ದಾರೆ. ನಿರ್ಮಾಣ ಸಮಿತಿಗೆ ಅರವಿಂದ ಪಟೇಲ್ ಚೇರ್ಮನ್, ಗೌತಮ್ ಪುಣೇಕರ ಕೋ-ಚೇರ್ಮನ್, ಮಳಿಗೆ ಸಮಿತಿಗೆ ವೀರಣ್ಣ ಕಾಡಪ್ಪನವರ ಚೇರ್ಮನ್, ವೀರಣ್ಣ ಗಡಗಿ ಕೋ-ಚೇರ್ಮನ್, ಪ್ರಚಾರ ಸಮಿತಿಗೆ ಈರಣ್ಣ ಮುದಗಲ್ಲ ಚೇರ್ಮನ್, ನಾಗರಾಜ ನರಗುಂದ ಕೋ-ಚೇರ್ಮನ್ ಆಗಿದ್ದಾರೆ.

ಕಾರ್ಯಕ್ರಮ ಸಮಿತಿಗೆ ಚಂದ್ರು ಬಾಳಿಹಳ್ಳಿಮಠ ಚೇರ್ಮನ್, ಮುರುಗೇಶ ಬಡ್ನಿ ಕೋ-ಚೇರ್ಮನ್, ವೇದಿಕೆ ಅಲಂಕಾರ ಸಮಿತಿಗೆ ವಿ.ಎಸ್. ಮಾಟಲದಿನ್ನಿ ಚೇರ್ಮನ್, ಸಂಜಯ ಬಾಗಮಾರ ಕೋ-ಚೇರ್ಮನ್; ಊಟ-ಉಪಾಹಾರ ಸಮಿತಿಗೆ ವಿ.ಹೆಚ್. ದೇಸಾಯಿಗೌಡ್ರ ಚೇರ್ಮನ್, ಈರಣ್ಣ ಬಾಳಿಕಾಯಿ ಕೋ-ಚೇರ್ಮನ್ ಆಗಿದ್ದಾರೆ.

ಜಾಹೀರಾತು ಸಮಿತಿಗೆ ದಾನಯ್ಯ ಗಣಾಚಾರಿ ಚೇರ್ಮನ್, ವೀರಭದ್ರಯ್ಯ ಧನ್ನೂರಹಿರೇಮಠ ಕೋ-ಚೇರ್ಮನ್, ಸಾಂಸ್ಕೃತಿಕ ಸಮಿತಿಗೆ ವಿಜಯಕುಮಾರ ಹಿರೇಮಠ ಚೇರ್ಮನ್, ಅಶ್ವಥ್ ಸುಲಾಖೆ ಕೋ-ಚೇರ್ಮನ್, ಮಹಿಳಾ ಸಮಿತಿಗೆ ಸುರೇಖಾ ಮಲ್ಲಾಡದ ಚೇರ್ಮನ್, ರಜಿಯಾ ಮುಲ್ಲಾನವರ ಕೋ-ಚೇರ್ಮನ್ ಆಗಿ ಆಯ್ಕೆಯಾಗಿದ್ದಾರೆ. ಉಪಸಮಿತಿಗಳ ರಚನೆಯ ಮೂಲಕ ಉತ್ಸವದ ಸಿದ್ಧತೆಗಳಿಗೆ ವೇಗ ನೀಡಲಾಗಿದ್ದು, ಕೈಗಾರಿಕಾ ಉತ್ಪನ್ನಗಳು, ಸಣ್ಣ ಉದ್ಯಮಗಳ ವಸ್ತುಗಳು ಹಾಗೂ ವಿವಿಧ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟಕ್ಕೆ ವೇದಿಕೆ ಕಲ್ಪಿಸಲಾಗುತ್ತಿದೆ ಎಂದು ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್‌ನ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಶೀಕಟ್ಟಿ ತಿಳಿಸಿದ್ದಾರೆ.

ಸಂಕ್ಷಿಪ್ತ ಸುದ್ದಿಗಳು

## ಪ್ರಕಲ್ಪ ಶಾಲೆಯಲ್ಲಿ ಕಣ್ಮನ ಸೆಳೆದ ರಂಗೋಲಿ ಸ್ಪರ್ಧೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಆನಂದ ಆಶ್ರಮ ರಸ್ತೆಯಲ್ಲಿರುವ ಪ್ರಕಲ್ಪ ಶಿಕ್ಷಣ ಸಂಸ್ಥೆ (ರಿ.)ಯ ಪ್ರಾಥಮಿಕ ಹಾಗೂ ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಶನಿವಾರ (ಆ.8) ವಿದ್ಯಾರ್ಥಿಗಳಿಗಾಗಿ ವರ್ಣಿಕಾ' ರಂಗೋಲಿ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.

ಶಾಲೆಯ 3ನೇ ತರಗತಿಯಿಂದ 8ನೇ ತರಗತಿಯವರೆಗಿನ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಉತ್ಸಾಹದಿಂದ ಭಾಗವಹಿಸಿ, ವಿವಿಧ ಬಣ್ಣಗಳ ಮೂಲಕ ತಮ್ಮ ಕಲಾ ಪ್ರತಿಭೆ ಹಾಗೂ ಸೃಜನಶೀಲತೆಯನ್ನು ಅನಾವರಣಗೊಳಿಸಿದರು. ವಿದ್ಯಾರ್ಥಿಗಳು ಮೂಡಿಸಿದ ವೈವಿಧ್ಯಮಯ ರಂಗೋಲಿ ಚಿತ್ತಾರಗಳು ನೋಡುಗರ ಗಮನ ಸೆಳೆದವು.

ರಂಗೋಲಿ ಕೇವಲ ನೆಲದ ಮೇಲೆ ಬಿಡಿಸುವ ಕಲೆಯಲ್ಲ. ಅದು ನಮ್ಮ ಸಂಪ್ರದಾಯ, ಸಂಸ್ಕೃತಿ, ಸಕಾರಾತ್ಮಕತೆ ಹಾಗೂ ಸೌಂದರ್ಯಪ್ರಜ್ಞೆಯನ್ನು ಬಿಂಬಿಸುವ ಕಲಾತ್ಮಕ ಅಭಿವ್ಯಕ್ತಿಯಾಗಿದೆ. ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ ಬೆಳೆಸುವ ಹಾಗೂ ಭಾರತೀಯ ಸಂಸ್ಕೃತಿಯ ಪರಿಚಯ ಮೂಡಿಸುವ ಉದ್ದೇಶದಿಂದ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಕಲ್ಪ ಶಿಕ್ಷಣ ಸಂಸ್ಥೆ (ರಿ.)ಯ ಸಂಸ್ಥಾಪಕ ಎಸ್.ವಿ. ಹುಬ್ಬಳ್ಳಿ ವಹಿಸಿದ್ದರು. ಮುಖ್ಯ ಅತಿಥಿಯಾಗಿ ಪ್ರಕಲ್ಪ ಶಿಕ್ಷಣ ಸಂಸ್ಥೆ (ರಿ.), ಗದಗದ ಮಾರ್ಗದರ್ಶಕರಾದ ಎಸ್.ಎನ್. ಹುಬ್ಬಳ್ಳಿ ಹಾಗೂ ಅತಿಥಿಯಾಗಿ ಸಂಸ್ಥೆಯ ಕಾರ್ಯದರ್ಶಿ ಪಿ.ಎಸ್. ಹುಬ್ಬಳ್ಳಿ ಪಾಲ್ಗೊಂಡಿದ್ದರು.

ಕಾರ್ಯಕ್ರಮದ ನಿರೂಪಣೆಯನ್ನು ಸಹ ಶಿಕ್ಷಕಿ ಪುಷ್ಪಾ ಪಿ. ಮೇಗೇರಿ ನಿರ್ವಹಿಸಿದರು. ಸ್ಪರ್ಧೆಯ ಮೇಲುಸ್ತುವಾರಿಯನ್ನು ಶಿಕ್ಷಕಿ ಶೋಭಾ ತದೇವಾಡಿ ವಹಿಸಿದ್ದರು. ಶಾಲೆಯ ಸಹ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕೈಬೆರಳುಗಳ ನಡುವೆ ಜಾರುವ ಬಣ್ಣದ ಪುಡಿ, ಬದುಕಿಗೆ ತರುವ ಸಂಭ್ರಮದ ಹೊಸ ಮೆರಗು ಎಂಬಂತೆ ವಿದ್ಯಾರ್ಥಿಗಳ ಕಲ್ಪನೆ ಹಾಗೂ ಪ್ರತಿಭೆ ರಂಗೋಲಿ ಚಿತ್ತಾರಗಳಲ್ಲಿ ಅನಾವರಣಗೊಂಡಿತು.

ರಂಗೋಲಿಯಂತೆ ಪ್ರತಿಯೊಬ್ಬರ ಬದುಕು ಬಣ್ಣಮಯವಾಗಲಿ, ಪ್ರೀತಿ-ಸೌಹಾರ್ದತೆಯ ಬೆಳಕು ಎಲ್ಲೆಡೆ ಪಸರಿಸಲಿ ಎಂಬ ಆಶಯದೊಂದಿಗೆ ಕಾರ್ಯಕ್ರಮ ಸಂಭ್ರಮದಿಂದ ನಡೆಯಿತು.

## ಸಾಮಾನ್ಯ ವ್ಯಕ್ತಿಯೊಬ್ಬ ಮುಖ್ಯಮಂತ್ರಿ ಆದರೆ ಏನಾಗಬಹುದು? ವಿಭಿನ್ನ ಕಥಾಹಂದರದ ಚಿತ್ರ

## ಸೆ.25ಕ್ಕೆ ಕಾಮನ್ ಮ್ಯಾನ್ ನಾನೇ ಸಿಎಂ ತೆರೆಗೆ



**ವಿಜಯಸಾಕ್ಷಿ ಸುದ್ದಿ, ಗದಗ**

ಸುರಭಿ ಫಿಲಂಸ್‌ನ ಕಾಮನ್ ಮ್ಯಾನ್ ನಾನೇ ಸಿಎಂ' ಚಿತ್ರ ಸೆ.25ರಂದು ತೆರೆಗೆ ಬರಲಿದೆ ಎಂದು ಚಿತ್ರದ ನಿರ್ಮಾಪಕ ಹಾಗೂ ಕಥೆ ರಚನಾಕಾರ ಡಾ. ಎನ್. ನರಸಿಂಹಮೂರ್ತಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಭಾನುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಮಾನ್ಯ ವ್ಯಕ್ತಿಯೊಬ್ಬ ರಾಜಕಾರಣಕ್ಕೆ ಬಂದು ಮುಖ್ಯಮಂತ್ರಿ ಹುದ್ದೆಗೇರಿದರೆ ಏನೆಲ್ಲ ಬದಲಾವಣೆ ತರಬಹುದು ಎಂಬುದನ್ನು ವಿಭಿನ್ನ ಕಥಾಹಂದರದ ಮೂಲಕ ಚಿತ್ರದಲ್ಲಿ ತೋರಿಸಲಾಗಿದೆ ಎಂದರು.

ಚಿತ್ರದ ನಾಯಕ ವೃತ್ತಿಯಲ್ಲಿ ವಕೀಲನಾಗಿದ್ದು, ಅನಿರೀಕ್ಷಿತ ಬೆಳವಣಿಗೆಯಲ್ಲಿ ರಾಜ್ಯದ ಮುಖ್ಯಮಂತ್ರಿಯಾಗುತ್ತಾನೆ. ಬಳಿಕ ಸಮಾಜದಲ್ಲಿ ಸುಧಾರಣೆ ತರಲು ಆತ ಕೈಗೊಳ್ಳುವ ಪ್ರಯತ್ನಗಳು ಹಾಗೂ ಎದುರಾಗುವ ಸನ್ನಿವೇಶಗಳನ್ನು ಕುತೂಹಲಕರವಾಗಿ ಕಟ್ಟಿಕೊಡಲಾಗಿದೆ ಎಂದು ಹೇಳಿದರು.

ಕೆರೆಬೇಟೆ' ಖ್ಯಾತಿಯ ಗೌರಿಶಂಕರ ನಾಯಕನಾಗಿ ನಟಿಸಿದ್ದು, ಸೋನಾ ಲದ್ವಾ ನಾಯಕಿಯಾಗಿ ಅಭಿನಯಿಸಿದ್ದಾರೆ. ಬಾಂಬೆ ಮೂಲದ ಮತ್ತೋರ್ವ ನಟಿಯೂ ಚಿತ್ರದಲ್ಲಿ ನಟಿಸಿದ್ದಾರೆ. ಚಿತ್ರಕ್ಕೆ ಸಾಯಿಪ್ರಕಾಶ್ ನಿರ್ದೇಶನ ಮಾಡಿದ್ದು, ಇದು ಅವರ ನಿರ್ದೇಶನದ 106ನೇ ಚಿತ್ರವಾಗಿದೆ. ವಿನಯ ಚಂದ್ರ ಸಂಗೀತ ನಿರ್ದೇಶನ, ಜೆ.ಜಿ. ಕೃಷ್ಣ ಹಾಗೂ ದೀಪಕ್ ಕುಮಾರ್ ಛಾಯಾಗ್ರಹಣ ಮಾಡಿದ್ದಾರೆ. ಬೆಂಗಳೂರು ಸೇರಿದಂತೆ ವಿವಿಧೆಡೆ ಚಿತ್ರೀಕರಣ ನಡೆಸಲಾಗಿದೆ ಎಂದು ನರಸಿಂಹಮೂರ್ತಿ ತಿಳಿಸಿದರು. ಚಿತ್ರವನ್ನು ಕುಟುಂಬ ಸಮೇತ ವೀಕ್ಷಿಸಬಹುದಾಗಿದ್ದು, ಕಲಾಪೋಷಕರು ಚಿತ್ರಮಂದಿರಗಳಿಗೆ ತೆರಳಿ ಚಿತ್ರ ವೀಕ್ಷಿಸುವ ಮೂಲಕ ಕಲಾವಿದರು ಹಾಗೂ ಚಿತ್ರತಂಡವನ್ನು ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು. ನಟಿ ಸೋನಾ ಲದ್ವಾ ಮಾತನಾಡಿ, ತಾವು ಮೂಲತಃ ರಾಣೆಬೆನ್ನೂರಿನವರಾಗಿದ್ದು, ಮಾಡೆಲಿಂಗ್ ಕ್ಷೇತ್ರದಲ್ಲಿದ್ದ ತಮ್ಮನ್ನು ಚಿತ್ರದಲ್ಲಿ ನಟಿಸಲು ಡಾ. ನರಸಿಂಹಮೂರ್ತಿ ಅವರು ಅವಕಾಶ ನೀಡಿದ್ದಾರೆ. ಪ್ರೇಕ್ಷಕರು ಚಿತ್ರಮಂದಿರಕ್ಕೆ ತೆರಳಿ ಚಿತ್ರವನ್ನು ವೀಕ್ಷಿಸುವಂತೆ ಮನವಿ ಮಾಡಿದರು. ಕದಂಬ ಸೈನ್ಯದ ರಾಜ್ಯಾಧ್ಯಕ್ಷ ಬೇಕ್ರಿ ರಮೇಶ ಮಾತನಾಡಿ, ಡಾ. ಎನ್. ನರಸಿಂಹಮೂರ್ತಿ ಅವರು ಬಡತನದಲ್ಲಿ ಬೆಳೆದು ಸಮಾಜಸೇವೆಯಲ್ಲಿ ಮುಂಚೂಣಿಯಲ್ಲಿದ್ದಾರೆ. ತಮ್ಮ ಆದಾಯದ ಶೇ.40ರಷ್ಟನ್ನು ಸಮಾಜಕ್ಕಾಗಿ ವ್ಯಯಿಸುತ್ತಿದ್ದಾರೆ. ಅವರ ಜೀವನ ಚರಿತ್ರೆಯನ್ನು ಅಕ್ಷರ ರೂಪದಲ್ಲಿ ದಾಖಲಿಸಿ ಆತ್ಮಚರಿತ್ರೆ ಹೊರತರುವ ಚಿಂತನೆ ಕದಂಬ ಸೈನ್ಯದ್ದಾಗಿದ್ದು, ಶೀಘ್ರದಲ್ಲೇ ಕಾರ್ಯರೂಪಕ್ಕೆ ಬರಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕದಂಬ ಸೈನ್ಯದ ರಾಜ್ಯ ಸಹ ಕಾರ್ಯದರ್ಶಿ ಉಮ್ಮಡಹಳ್ಳಿ ನಾಗೇಶ, ರಾಜ್ಯ ಸಮಿತಿ ಸದಸ್ಯ ಲಕ್ಷ್ಮಣ ಎಲೆಕೇರಿ ಚನ್ನಪಟ್ಟಣ, ಬನಶಂಕರಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಅಪ್ಪಣ್ಣ ಬಸೆಟ್ಟೆಪ್ಪ ನೂರೊಂದಪ್ಪ ಹುಂಡೇಕಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಒಬ್ಬ ಸಾಮಾನ್ಯ ಮನುಷ್ಯ ರಾಜಕಾರಣಕ್ಕೆ ಬರುವುದು ಸುಲಭವಲ್ಲ. ಸಮಾಜದಲ್ಲಿ ಎದುರಾದ ಅವಮಾನವನ್ನೇ ಅವಕಾಶವಾಗಿ ಬಳಸಿಕೊಂಡು ಮುಖ್ಯಮಂತ್ರಿ ಹುದ್ದೆಗೇರುವ ಕಥೆ ಚಿತ್ರದಲ್ಲಿದೆ. ಇದು ವಿಭಿನ್ನ ಕಥೆಯಾಗಿದ್ದು, ಮನರಂಜನೆಯ ಜತೆಗೆ ಸಮಾಜಕ್ಕೆ ಸಂದೇಶ ನೀಡುವ ಪ್ರಯತ್ನ ಮಾಡಲಾಗಿದೆ.
>
> – **ಡಾ. ಎನ್. ನರಸಿಂಹಮೂರ್ತಿ**, ನಿರ್ಮಾಪಕ ಹಾಗೂ ಕಥೆ ರಚನಾಕಾರ

ಗದಗ ಮೀಡಿಯಾ ಕ್ರಿಕೆಟ್ ಲೀಗ್ ಅಭ್ಯಾಸ ಪಂದ್ಯಾವಳಿ | ಆರ್‌ಸಿಬಿ ವಿರುದ್ಧ 10 ವಿಕೆಟ್‌ಗಳ ಭರ್ಜರಿ ಜಯ | ಕೊನೆಯ ಎಸೆತದವರೆಗೂ ರೋಚಕ ಹೋರಾಟ

# ನೈಟ್ ರೈಡರ್ಸ್‌ಗೆ 2 ರನ್‌ಗಳ ಗೆಲುವು

**ವಿಜಯಸಾಕ್ಷಿ ಸುದ್ದಿ, ಗದಗ**

ಪತ್ರಿಕಾ ದಿನಾಚರಣೆ ಅಂಗವಾಗಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ವತಿಯಿಂದ ಆಯೋಜಿಸಿರುವ ಗದಗ ಮೀಡಿಯಾ ಕ್ರಿಕೆಟ್ ಲೀಗ್ (ಎಖಇಔ) ಪಂದ್ಯಾವಳಿಯ ಅಂಗವಾಗಿ ಭಾನುವಾರ ನಡೆದ ಎರಡನೇ ಅಭ್ಯಾಸ ಪಂದ್ಯಾವಳಿಯಲ್ಲಿ ಪತ್ರಕರ್ತ ಎಚ್.ಎಂ. ಶರೀಫನವರ್ ನೇತೃತ್ವದ ನೈಟ್ ರೈಡರ್ಸ್ ತಂಡ ಭರ್ಜರಿ ಪ್ರದರ್ಶನ ನೀಡಿ ಗಮನ ಸೆಳೆಯಿತು.

ನಾಲ್ಕು ತಂಡಗಳಾದ ನೈಟ್ ರೈಡರ್ಸ್, ರೂರಲ್ ಕಿಂಗ್ಸ್, ಆರ್‌ಸಿಬಿ ಹಾಗೂ ವಿನ್ನರ್ಸ್ ನಡುವೆ ನಡೆದ ಪಂದ್ಯಾವಳಿಯಲ್ಲಿ ನೈಟ್ ರೈಡರ್ಸ್ ತಂಡ ಮೊದಲ ಪಂದ್ಯದಲ್ಲಿ ಆರ್‌ಸಿಬಿ ವಿರುದ್ಧ 10 ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸಿದರೆ, ಫೈನಲ್‌ನಲ್ಲಿ ರೂರಲ್ ಕಿಂಗ್ಸ್ ವಿರುದ್ಧ ಕೇವಲ 2 ರನ್‌ಗಳ ಅಂತರದಲ್ಲಿ ರೋಚಕ ಜಯ ದಾಖಲಿಸಿತು.

**ಆರ್‌ಸಿಬಿಗೆ ವಿಕೆಟ್ ನಷ್ಟವಿಲ್ಲದೆ ಸೋಲು**

ಮೊದಲ ಪಂದ್ಯದಲ್ಲಿ ಟಾಸ್ ಗೆದ್ದ ನೈಟ್ ರೈಡರ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ ತಂಡ ನಿಗದಿತ 10 ಓವರ್‌ಗಳಲ್ಲಿ 82 ರನ್ ಗಳಿಸಿತು. ತಂಡದ ಪರ ಆರಂಭಿಕರಾದ ವಿನಾಯಕ ಚೌಡಾಪುರ 18 ಹಾಗೂ ವೀರೇಶ ಉಮನಾಬಾದಿ 13 ರನ್ ಗಳಿಸಿದರು.

ನೈಟ್ ರೈಡರ್ಸ್ ಪರ ಅರುಣಕುಮಾರ ಹಿರೇಮಠ 2 ವಿಕೆಟ್, ಸುರೇಶ ಕಡ್ಲಿಮಟ್ಟಿ ಹಾಗೂ ಮಂಜು ಪತ್ತಾರ ತಲಾ ಒಂದು ವಿಕೆಟ್ ಪಡೆದರು.



82 ರನ್‌ಗಳ ಗುರಿ ಬೆನ್ನತ್ತಿದ ನೈಟ್ ರೈಡರ್ಸ್ ಕೇವಲ 6 ಓವರ್‌ಗಳಲ್ಲೇ ವಿಕೆಟ್ ನಷ್ಟವಿಲ್ಲದೆ ಗೆಲುವಿನ ಗಡಿ ತಲುಪಿತು. ನಾಯಕ ಸುರೇಶ ಕಡ್ಲಿಮಟ್ಟಿ 48 ಹಾಗೂ ಆರಂಭಿಕ ಉಮೇಶ ಸಜ್ಜನ 22 ರನ್ ಗಳಿಸಿ ಅಜೇಯರಾಗಿ ಉಳಿದರು.

**ವಿನ್ನರ್ಸ್ ವಿರುದ್ಧ ರೂರಲ್ ಕಿಂಗ್ಸ್ ಅಬ್ಬರ**

ಎರಡನೇ ಪಂದ್ಯದಲ್ಲಿ ವಿನ್ನರ್ಸ್ ತಂಡವನ್ನು ರೂರಲ್ ಕಿಂಗ್ಸ್ 9 ವಿಕೆಟ್‌ಗಳಿಂದ ಮಣಿಸಿತು.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ವಿನ್ನರ್ಸ್ ತಂಡ 10 ಓವರ್‌ಗಳಲ್ಲಿ 93 ರನ್ ಗಳಿಸಿತು. ಅನಿಲ ತೆಂಬದಮನಿ 25, ಅಶೋಕ 17 ಹಾಗೂ ಶಂಭು 12 ರನ್ ಗಳಿಸಿದರು.

ರೂರಲ್ ಕಿಂಗ್ಸ್ ಪರ ಸಂಜೀವ ಪಾಂಡ್ರೆ 3, ನಿಂಗನಗೌಡ ಹನಮಗೌಡ್ರ 2 ಹಾಗೂ ಶಿವಾನಂದ ಹಿರೇಮಠ 1 ವಿಕೆಟ್ ಪಡೆದರು.

ಗುರಿ ಬೆನ್ನತ್ತಿದ ರೂರಲ್ ಕಿಂಗ್ಸ್ ತಂಡ ಕೇವಲ ಒಂದು ವಿಕೆಟ್ ಕಳೆದುಕೊಂಡು ಗೆಲುವು ಸಾಧಿಸಿತು. ಆರಂಭಿಕರಾದ ಶಿವಾನಂದ ಹಿರೇಮಠ 48 ಹಾಗೂ ನಿಂಗನಗೌಡ ಹನಮಗೌಡ್ರ 31 ರನ್ ಗಳಿಸಿ ತಂಡಕ್ಕೆ ಸುಲಭ ಗೆಲುವು ತಂದುಕೊಟ್ಟರು.

**2 ರನ್‌ಗಳ ರೋಚಕ ಗೆಲುವು; ಸೋಲಿಗೆ ಸೇಡು**

ಬಳಿಕ ನಡೆದ ನೈಟ್ ರೈಡರ್ಸ್ ಹಾಗೂ ರೂರಲ್ ಕಿಂಗ್ಸ್ ನಡುವಿನ ಫೈನಲ್ ಪಂದ್ಯವೇ ದಿನದ ಪ್ರಮುಖ ಆಕರ್ಷಣೆಯಾಗಿತ್ತು. ಕಳೆದ ಭಾನುವಾರ ರೂರಲ್ ಕಿಂಗ್ಸ್ ವಿರುದ್ಧ ಕಂಡಿದ್ದ ಸೋಲಿಗೆ ನೈಟ್ ರೈಡರ್ಸ್ ತಂಡ ಈ ಪಂದ್ಯದಲ್ಲಿ ಕೇವಲ 2 ರನ್‌ಗಳ ಅಂತರದ ಗೆಲುವಿನ ಮೂಲಕ ಸೇಡು ತೀರಿಸಿಕೊಂಡಿತು. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ನೈಟ್ ರೈಡರ್ಸ್ ತಂಡ ನಿಗದಿತ 10 ಓವರ್‌ಗಳಲ್ಲಿ 89 ರನ್ ಗಳಿಸಿತು. ಅರುಣಕುಮಾರ ಹಿರೇಮಠ 25, ಉಮೇಶ ಸಜ್ಜನ 17, ಮಂಜು ಪತ್ತಾರ 13 ಹಾಗೂ ಸಂಗನಗೌಡ ಖಾನಪ್ಪಗೌಡ್ರ 11 ರನ್ ಗಳಿಸಿದರು. ರೂರಲ್ ಕಿಂಗ್ಸ್ ಪರ ಸಂಜೀವ ಪಾಂಡ್ರೆ 2 ವಿಕೆಟ್, ಶಿವಾನಂದ ಹಿರೇಮಠ ಹಾಗೂ ನಿಂಗನಗೌಡ ಹನಮಗೌಡ್ರ ತಲಾ ಒಂದು ವಿಕೆಟ್ ಪಡೆದರು. 89 ರನ್‌ಗಳ ಗುರಿ ಬೆನ್ನತ್ತಿದ ರೂರಲ್ ಕಿಂಗ್ಸ್ ತಂಡ 10 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 87 ರನ್ ಗಳಿಸಲಷ್ಟೇ ಶಕ್ತವಾಯಿತು. ಪರಶುರಾಮ ಹಳ್ಳದ 26, ಪ್ರಕಾಶ ಗುದ್ದಿನ 20 ಹಾಗೂ ನಿಂಗನಗೌಡ ಹನಮಗೌಡ್ರ 10 ರನ್ ಗಳಿಸಿದರು.

ನೈಟ್ ರೈಡರ್ಸ್ ಪರ ಸುರೇಶ ಕಡ್ಲಿಮಟ್ಟಿ ಹಾಗೂ ಉಮೇಶ ಸಜ್ಜನ ತಲಾ 2 ವಿಕೆಟ್, ಮಂಜು ಪತ್ತಾರ ಹಾಗೂ ಸಂಗನಗೌಡ ಖಾನಪ್ಪಗೌಡ್ರ ತಲಾ ಒಂದು ವಿಕೆಟ್ ಪಡೆದು ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿದರು.

ಈ ಸಂದರ್ಭದಲ್ಲಿ ಕಾನಿಪ ಜಿಲ್ಲಾ ಅಧ್ಯಕ್ಷ ರಾಜು ಹೆಬ್ಬಳ್ಳಿ, ರಾಜ್ಯ ಕಾರ್ಯಕಾರಿಣಿ ಸಮಿತಿ ಸದಸ್ಯ ಅರುಣಕುಮಾರ ಹಿರೇಮಠ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ, ಹಿರಿಯ ವರದಿಗಾರರಾದ ಅನಂತ ಕಾರ್ಕಳ, ಅನಿಲ ತೆಂಬದಮನಿ, ಸುನಿಲ ತೆಂಬದಮನಿ, ಸಂಪಾದಕರಾದ ಎಚ್.ಎಂ. ಶರೀಫನವರ್, ಜಗದೀಶ್ ಎಸ್.ಪಿ., ಆನಂದ ಸಾಲಿಗ್ರಾಮ ಸೇರಿದಂತೆ ಸಂಪಾದಕರು, ವರದಿಗಾರರು ಹಾಗೂ ಛಾಯಾಗ್ರಾಹಕರು ಉಪಸ್ಥಿತರಿದ್ದರು.

ಗದಗ ಮೀಡಿಯಾ ಕ್ರಿಕೆಟ್ ಲೀಗ್‌ನ ಕ್ರೀಡಾ ಸಮಿತಿ ಪದಾಧಿಕಾರಿಗಳಾದ ವೆಂಕಟೇಶ ಇಮರಾಪುರ, ಸಂತೋಷ ಕೊಣ್ಣೂರ ಹಾಗೂ ರುದ್ರಗೌಡ ಪಾಟೀಲ ಸೇರಿದಂತೆ ಹಲವರು ಪಂದ್ಯಾವಳಿಯ ಆಯೋಜನೆಯಲ್ಲಿ ಪ್ರಮುಖ ಪಾತ್ರವಹಿಸಿದರು.

> ನಮ್ಮ ತಂಡದ ಎಲ್ಲ ಆಟಗಾರರು ಉತ್ತಮ ಪ್ರದರ್ಶನ ನೀಡುವ ಮೂಲಕ ವಿಜೇತ ತಂಡವಾಗಿ ಹೊರಹೊಮ್ಮಲು ಕಾರಣರಾಗಿದ್ದಾರೆ. ದಿನನಿತ್ಯದ ಅಭ್ಯಾಸದಿಂದ ಉತ್ತಮ ಪ್ರದರ್ಶನ ನೀಡಲು ಸಾಧ್ಯವಾಯಿತು. ಒಟ್ಟಾರೆಯಾಗಿ ಕ್ರೀಡಾ ಮನೋಭಾವದಿಂದ ನಾಲ್ಕು ತಂಡಗಳ ಮಾಲೀಕರು, ನಾಯಕರು ಹಾಗೂ ಆಟಗಾರರು ಭಾಗವಹಿಸಿ ಪಂದ್ಯಾವಳಿಯನ್ನು ಯಶಸ್ವಿಗೊಳಿಸಿದ್ದಾರೆ. ಮುಂದಿನ ಪಂದ್ಯಗಳಲ್ಲಿ ನಾಲ್ಕೂ ತಂಡಗಳು ಮತ್ತಷ್ಟು ಉತ್ತಮ ಪ್ರದರ್ಶನ ನೀಡಲಿ.
>
> – **ಎಚ್.ಎಂ. ಶರೀಫನವರ್, ನೈಟ್ ರೈಡರ್ಸ್ ತಂಡದ ಮಾಲೀಕರು**

## ಸದಸ್ಯರಿಗೆ ಶೇ.10ರಷ್ಟು ಲಾಭಾಂಶ ಘೋಷಣೆ

## ಪಂಚಮಸಾಲಿ ಸಹಕಾರಿಗೆ ₹5.11 ಲಕ್ಷ ನಿವ್ವಳ ಲಾಭ




**ವಿಜಯಸಾಕ್ಷಿ ಸುದ್ದಿ, ಗದಗ**

ವೀರಶೈವ ಪಂಚಮಸಾಲಿ ಸೌಹಾರ್ದ ಪತ್ತಿನ ಸಹಕಾರಿ ನಿಯಮಿತ, ಗದಗ ಸಂಸ್ಥೆಯ 202526ನೇ ಸಾಲಿನ 30ನೇ ವಾರ್ಷಿಕ ಸರ್ವ ಸಾಧಾರಣ ಮಹಾಸಭೆ ಭಾನುವಾರ ಎಪಿಎಂಸಿ ಯಾರ್ಡ್‌ನ ಸ್ಟೇಟ್ ಬ್ಯಾಂಕ್ ಎದುರಿನ ಸಹಕಾರಿ ಕಚೇರಿ ಆವರಣದಲ್ಲಿ ನಡೆಯಿತು.

ಸಹಕಾರಿ ಅಧ್ಯಕ್ಷ ಎಸ್.ಎಂ. ಪಾಟೀಲ (ಮಲ್ಲಸಮುದ್ರ) ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ 202526ನೇ ಸಾಲಿನ ಲೆಕ್ಕಪತ್ರ, ಜಮಾಖರ್ಚು, ಲಾಭಹಾನಿ, ಅಢಾವೆ ಪತ್ರಿಕೆ ಹಾಗೂ ಲೆಕ್ಕಪರಿಶೋಧನಾ ವರದಿಯ ಅನುಪಾಲನಾ ವರದಿ ಸೇರಿದಂತೆ ಅಜೆಂಡಾದ 1ರಿಂದ 23ರವರೆಗಿನ ವಿಷಯಗಳನ್ನು ಚಆರ್‌ಸಿ ಸರ್ವಾನುಮತದಿಂದ ಅನುಮೋದಿಸಲಾಯಿತು.

ಸಹಕಾರಿಯ ಮ್ಯಾನೇಜರ್ ವಿ.ಸಿ. ಕರಡಿ ಅವರು ಸಭೆಯಲ್ಲಿ ಸಂಸ್ಥೆಯ ಸಂಪೂರ್ಣ ಮಾಹಿತಿಯನ್ನು ಸದಸ್ಯರಿಗೆ ವಿವರಿಸಿದರು. 202627ನೇ ಸಾಲಿನ ಅಂದಾಜು ಆಯವ್ಯಯ ಪತ್ರಿಕೆಯನ್ನೂ ಸಭೆಯಲ್ಲಿ ಮಂಡಿಸಲಾಯಿತು.

202526ನೇ ಸಾಲಿನಲ್ಲಿ ಸಹಕಾರಿಯು ₹5,11,104.28 ನಿವ್ವಳ ಲಾಭ ಗಳಿಸಿದೆ. ಈ ಹಿನ್ನೆಲೆಯಲ್ಲಿ ಸದಸ್ಯರಿಗೆ ಶೇ.10ರಷ್ಟು ಲಾಭಾಂಶ (ಡಿವಿಡೆಂಡ್) ವಿತರಿಸಲು ಘೋಷಿಸಲಾಯಿತು.

ಸಭೆಯ ಆರಂಭದಲ್ಲಿ ಸಹಕಾರಿ ಸದಸ್ಯರು ನಿಧನ ಹೊಂದಿದ ಹಿನ್ನೆಲೆಯಲ್ಲಿ ಎರಡು ನಿಮಿಷ ಮೌನಾಚರಣೆ ಸಲ್ಲಿಸಲಾಯಿತು. ಐ.ಬಿ. ಅವರಾದಿ ಕಾರ್ಯಕ್ರಮ ನಿರೂಪಿಸಿದರು. ನಿರ್ದೇಶಕ ವಿ.ಎಸ್. ಉಪ್ಪಿನ ಸ್ವಾಗತಿಸಿದರು.

ಸಮಾಜದ ಆಶಯದಂತೆ ಸಭೆಯಲ್ಲಿ ಪಂಚಮಸಾಲಿ ವಧುವರರ ಮಾಹಿತಿ ಕೇಂದ್ರವನ್ನು ಆರಂಭಿಸಲಾಯಿತು. ಇದರ ಪ್ರಯೋಜನವನ್ನು ಸಮಾಜದ ಎಲ್ಲರೂ ಪಡೆದುಕೊಳ್ಳುವಂತೆ ಮನವಿ ಮಾಡಲಾಯಿತು.

ಮಲ್ಲಪ್ಪ ಯ. ಹುಣಸಿಕಟ್ಟಿ (ಹೊಂಬಳ) ಅವರು ಮಾಹಿತಿ ಕೇಂದ್ರವನ್ನು ಉದ್ಘಾಟಿಸಿದರು. ನಿವೃತ್ತ ಜಿಲ್ಲಾ ಸರ್ಜನ್ ಡಾ. ಆರ್.ಎನ್. ಪಾಟೀಲ ಅವರು ವಿದ್ಯಾರ್ಥಿಗಳಿಗೆ ಸನ್ಮಾನ ನೆರವೇರಿಸಿದರು.


ವೇದಿಕೆಯಲ್ಲಿ ಸಹಕಾರಿ ಉಪಾಧ್ಯಕ್ಷ ಡಿ.ಎನ್. ಆಸಂಗಿ, ನಿರ್ದೇಶಕರಾದ ಎಸ್.ಬಿ. ಕಲಕೇರಿ, ಎಸ್.ಎಲ್. ನೀಲಗುಂದ, ವಿ.ಎಸ್. ಉಪ್ಪಿನ, ಸವಿತಾ ಎಂ. ಪಾಟೀಲ ಹಾಗೂ ರಾಜೇಶ್ವರಿ ಐ. ಕಣವಿ ಉಪಸ್ಥಿತರಿದ್ದರು.

ನಿರ್ದೇಶಕ ಎಸ್.ಎಲ್. ನೀಲಗುಂದ ವಂದನಾರ್ಪಣೆ ಸಲ್ಲಿಸಿ, ಸಂಸ್ಥೆಯ ಸದಸ್ಯರು, ನೌಕರ ವರ್ಗ ಹಾಗೂ ಪಿಗ್ಮಿ ಏಜೆಂಟರಿಗೆ ಕೃತಜ್ಞತೆ ಸಲ್ಲಿಸಿದರು.

### 12 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

ಸಹಕಾರಿ ಸದಸ್ಯರ ಮಕ್ಕಳಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ.85ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಎಸ್‌ಎಸ್‌ಎಲ್‌ಸಿಯ 7 ವಿದ್ಯಾರ್ಥಿಗಳು ಹಾಗೂ ಪಿಯುಸಿಯ 5 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 12 ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ಹಾಗೂ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

## ಶಿವಳ್ಳಿಯಲ್ಲಿ ಪಂಚಾಯಿತಿ ಕನ್ನಡ ಚಿತ್ರದ ಚಿತ್ರೀಕರಣ



**ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ನೇಟಿವ್ ಕ್ರಿಯೇಷನ್ಸ್ ಅಡಿಯಲ್ಲಿ ದೊಡ್ಡ ನಾಗಯ್ಯ ನಿರ್ಮಿಸುತ್ತಿರುವ ಹಾಗೂ ಹಿರಿಯ ನಿರ್ದೇಶಕ ಪಿ. ಶೇಷಾದ್ರಿ ನಿರ್ದೇಶನದ ಪಂಚಾಯಿತಿ' ಕನ್ನಡ ಚಲನಚಿತ್ರದ ಚಿತ್ರೀಕರಣ ಧಾರವಾಡ ಸಮೀಪದ ಶಿವಳ್ಳಿಯಲ್ಲಿ ಭರದಿಂದ ಸಾಗಿದೆ. ಹುಬ್ಬಳ್ಳಿ, ಶಿವಳ್ಳಿ, ಹೆಬಸೂರ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕಳೆದೊಂದು ವಾರದಿಂದ ಚಿತ್ರದ ಚಿತ್ರೀಕರಣ ನಡೆಯುತ್ತಿದೆ.

ಚಿತ್ರದ ಕಥೆ ಉತ್ತರ ಕರ್ನಾಟಕದ ಹಾಲಳ್ಳಿ ಎಂಬ ಗ್ರಾಮದ ಗ್ರಾಮ ಪಂಚಾಯಿತಿ ಚುನಾವಣೆಯ ಸುತ್ತ ಹೆಣೆದಿದೆ. ಪಂಚಾಯಿತಿ ಅಧ್ಯಕ್ಷರ ಹಠಾತ್ ನಿಧನದಿಂದ ಆರಂಭವಾಗುವ ಸಂಘರ್ಷ ಕ್ರಮೇಣ ಇಡೀ ಗ್ರಾಮದ ರಾಜಕೀಯ ಸ್ವರೂಪವನ್ನೇ ಬದಲಿಸುವ ಕಥಾವಸ್ತುವನ್ನು ಹೊಂದಿದೆ. ಚುನಾವಣಾ ಕಣಕ್ಕೆ ಸ್ಥಳೀಯ ಶಾಸಕರ ಪ್ರವೇಶ, ಹಣದ ಪ್ರಭಾವ, ಜಾತಿ ಹಾಗೂ ಸಾಮಾಜಿಕ ಸಮೀಕರಣಗಳು ಮತ್ತು ಸ್ಥಳೀಯ ಅಸಮಾಧಾನಗಳು ಕಥೆಯಲ್ಲಿ ಪ್ರಮುಖವಾಗಿ ಮೂಡಿಬರಲಿವೆ. ಚಿತ್ರದ ಪ್ರಮುಖ ಪಾತ್ರವಾದ ಪಾಟೀಲ' ಇಂದಿನ ರಾಜಕೀಯ ವ್ಯವಸ್ಥೆಯ ಪ್ರತಿನಿಧಿಯಾಗಿ ಕಾಣಿಸಿಕೊಳ್ಳಲಿದೆ.

ಚಿತ್ರದ ಕಥೆಯನ್ನು ಅರವಿಂದ ಮಿತ್ರ ಬರೆದಿದ್ದು, ಪಿ. ಶೇಷಾದ್ರಿ, ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಗುರುಪ್ರಸಾದ್ ಕಾಶಿ ಛಾಯಾಗ್ರಹಣ ಹಾಗೂ ಕೆಂಪರಾಜ್ ಸಂಕಲನದ ಜವಾಬ್ದಾರಿ ವಹಿಸಿದ್ದಾರೆ.

ಚಿತ್ರದಲ್ಲಿ ಉತ್ತರ ಕರ್ನಾಟಕದ ಸ್ಥಳೀಯ ಕಲಾವಿದರಿಗೆ ಅವಕಾಶ ನೀಡಲಾಗಿದ್ದು, ಮುಖ್ಯ ಭೂಮಿಕೆಯಲ್ಲಿ ಗೋಕುಲ್ ರಾಜ್, ಬಿಂದು, ಜಗದೀಶ್ ಮೂಕಿ, ಶ್ರುತಿ ಬಿಸರಹಳ್ಳಿ ಹಾಗೂ ಬಸವರಾಜ್ ತಿರ್ಲಾಪುರ ಸೇರಿದಂತೆ ಹಲವರು ಅಭಿನಯಿಸುತ್ತಿದ್ದಾರೆ.

ಸಹ ನಿರ್ದೇಶಕರಾಗಿ ಟಿ.ಆರ್. ಪ್ರಭು, ವಿದ್ಯಾಶ್ರೀ ಹಾಗೂ ಪ್ರಕಾಶ್‌ರಾಜಕುಮಾರ್ ಕಾರ್ಯನಿರ್ವಹಿಸುತ್ತಿದ್ದಾರೆ. ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವೀರೇಶ್ ಹಂಡಿಗಿ ಪಿಆರ್‌ಒ ಆಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಚಿತ್ರಕ್ಕೆ ದೊಡ್ಡ ನಾಗಯ್ಯ ಬಂಡವಾಳ ಹೂಡಿದ್ದಾರೆ.

## ಜನಸಂಖ್ಯೆ ಬೆಳವಣಿಗೆ ಎಂದರೆ ಕೇವಲ ಜನರ ಸಂಖ್ಯೆ ಹೆಚ್ಚಳವಲ್ಲ

**ವಿಜಯಸಾಕ್ಷಿ ಸುದ್ದಿ, ಗದಗ**

ಜನಸಂಖ್ಯಾ ಬೆಳವಣಿಗೆಯನ್ನು ಕೇವಲ ಸಂಖ್ಯೆಗಳ ಹೆಚ್ಚಳದ ದೃಷ್ಟಿಯಿಂದ ನೋಡದೆ, ಸಾಮಾಜಿಕ ಪರಿವರ್ತನೆ, ಆರ್ಥಿಕ ಅಭಿವೃದ್ಧಿ, ನಗರೀಕರಣ, ಶಿಕ್ಷಣ, ಉದ್ಯೋಗ ಹಾಗೂ ಜೀವನಮಟ್ಟದೊಂದಿಗೆ ಅದರ ಸಂಬಂಧವನ್ನು ಅರ್ಥಮಾಡಿಕೊಳ್ಳಬೇಕು ಎಂದು ಕರ್ನಾಟಕ ವಿಶ್ವವಿದ್ಯಾಲಯದ ಸಮಾಜಶಾಸ್ತ್ರ ವಿಭಾಗದ ಹಿರಿಯ ಪ್ರಾಧ್ಯಾಪಕ ಹಾಗೂ ಡೀನ್ ಪ್ರೊ. ಶೌಕತ್ ಅಜೀಮ್ ಹೇಳಿದರು.

ಕೆ.ಎಲ್.ಇ. ಸಂಸ್ಥೆಯ ಜಗದ್ಗುರು ತೋಂಟದಾರ್ಯ ಮಹಾವಿದ್ಯಾಲಯದ ಸಮಾಜಶಾಸ್ತ್ರ ವಿಭಾಗದ ಆಶ್ರಯದಲ್ಲಿ ಆ.8ರಂದು ಭಾರತದಲ್ಲಿ ಜನಸಂಖ್ಯಾ ಬೆಳವಣಿಗೆಯ ಪ್ರವೃತ್ತಿಗಳು ಮತ್ತು ಮಾದರಿಗಳು' ವಿಷಯದ ಕುರಿತು ಆಯೋಜಿಸಿದ್ದ ವಿಶೇಷ ಉಪನ್ಯಾಸದಲ್ಲಿ ಅವರು ಮಾತನಾಡಿದರು.

ಭಾರತದ ಜನಸಂಖ್ಯಾ ಬೆಳವಣಿಗೆಯ ಐತಿಹಾಸಿಕ ಹಿನ್ನೆಲೆ, ಪ್ರಸ್ತುತ ಜನಸಂಖ್ಯಾ ಪ್ರವೃತ್ತಿಗಳು ಹಾಗೂ ಜನಸಂಖ್ಯೆಯ ಬದಲಾವಣೆಗೆ ಕಾರಣವಾಗುವ ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ಅಂಶಗಳ ಕುರಿತು ಪ್ರೊ. ಶೌಕತ್ ಅಜೀಮ್ ವಿವರಿಸಿದರು. ಅಲ್ಲದೇ ಜನಸಂಖ್ಯಾ ಬೆಳವಣಿಗೆಯಿಂದ ದೇಶದ ಅಭಿವೃದ್ಧಿಯ ಮೇಲೆ ಉಂಟಾಗುವ ಪರಿಣಾಮಗಳ ಬಗ್ಗೆಯೂ ಮಾಹಿತಿ ನೀಡಿದರು.




ಜನಸಂಖ್ಯೆಯನ್ನು ಅರ್ಥ ಮಾಡಿಕೊಳ್ಳುವುದೆಂದರೆ ಸಮಾಜದ ಬದಲಾವಣೆಯನ್ನು ಅರ್ಥ ಮಾಡಿಕೊಳ್ಳುವುದು ಎಂಬ ಸಂದೇಶದೊಂದಿಗೆ ನಡೆದ ಉಪನ್ಯಾಸವು ವಿದ್ಯಾರ್ಥಿಗಳಿಗೆ ಭಾರತದ ಜನಸಂಖ್ಯಾ ಬೆಳವಣಿಗೆಯನ್ನು ವಿವಿಧ ಆಯಾಮಗಳಲ್ಲಿ ಅರ್ಥಮಾಡಿಕೊಳ್ಳಲು ಅವಕಾಶ ಕಲ್ಪಿಸಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ವಿಶ್ವನಾಥ ಜಿ. ಮಾತನಾಡಿ, ಜನಸಂಖ್ಯಾ ಬೆಳವಣಿಗೆ ಎನ್ನುವುದು ಕೇವಲ ಜನರ ಸಂಖ್ಯೆ ಹೆಚ್ಚಳವಲ್ಲ. ಅದು ದೇಶದ ಸಾಮಾಜಿಕ, ಆರ್ಥಿಕ ಹಾಗೂ ಸಾಂಸ್ಕೃತಿಕ ಅಭಿವೃದ್ಧಿಯೊಂದಿಗೆ ನಿಕಟ ಸಂಬಂಧ ಹೊಂದಿದೆ ಎಂದರು.

ಐಕ್ಯೂಎಸಿ ಸಂಚಾಲಕ ಡಾ. ರಮೇಶ್ ಜಿ.ಕೆ. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ. ನೇತ್ರಾವತಿ ಅಂಗಡಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರೊ. ಎಂ.ಆರ್. ಹಳ್ಳಿಗುಡಿ ಅತಿಥಿಗಳ ಪರಿಚಯ ಮಾಡಿದರು. ಕು. ಅನುಷಾ ಲಿಂಗಾರೆಡ್ಡಿ ಕಾರ್ಯಕ್ರಮ ನಿರೂಪಿಸಿದರು. ರಾಜೇಶ್ವರಿ ಮುಳಗುಂದ ವಂದಿಸಿದರು.

## ಗದಗ ಉತ್ಸವಕ್ಕೆ ಮೆಣಸಿನಕಾಯಿ ವ್ಯಾಪಾರಸ್ಥರ ಬೆಂಬಲ



**ವಿಜಯಸಾಕ್ಷಿ ಸುದ್ದಿ, ಗದಗ**

ಆಗಸ್ಟ್ 14ರಿಂದ 18ರವರೆಗೆ ನಡೆಯಲಿರುವ ಗದಗ ಉತ್ಸವ-2026ಕ್ಕೆ ಗದಗ ಎ.ಪಿ.ಎಂ.ಸಿ.ಯ ಮೆಣಸಿನಕಾಯಿ ವ್ಯಾಪಾರಸ್ಥರನ್ನು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ವತಿಯಿಂದ ಅಧಿಕೃತವಾಗಿ ಆಹ್ವಾನಿಸಲಾಯಿತು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ಅವರ ನೇತೃತ್ವದಲ್ಲಿ ಎ.ಪಿ.ಎಂ.ಸಿ.ಯ ಮೆಣಸಿನಕಾಯಿ ವ್ಯಾಪಾರಸ್ಥರನ್ನು ಭೇಟಿ ಮಾಡಿ ಗದಗ ಉತ್ಸವದಲ್ಲಿ ಭಾಗವಹಿಸಿ, ಉತ್ಸವದ ಯಶಸ್ಸಿಗೆ ಸಹಕಾರ ನೀಡುವಂತೆ ಮನವಿ ಮಾಡಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಮಾಜಿ ಅಧ್ಯಕ್ಷರಾದ ಮಧುಸೂದನ ಪುಣೇಕರ, ತಾತನಗೌಡ ಪಾಟೀಲ, ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಸಿಕಟ್ಟಿ, ಉಪಾಧ್ಯಕ್ಷ ಪ್ರಕಾಶ ಉಗಲಾಟದ, ಸಹ ಗೌರವ ಕಾರ್ಯದರ್ಶಿಗಳಾದ ಅಶೋಕ ಸಂಕಣ್ಣನವರ, ರಾಘವೇಂದ್ರ ಕಾಲವಾಡ ಸೇರಿದಂತೆ ಮೆಣಸಿನಕಾಯಿ ವ್ಯಾಪಾರಸ್ಥರಾದ ಅಶೋಕ ಗಡಾದ, ಸ್ವಸ್ತಿಕ ಅಂಗಡಿ ಮಾಲೀಕರು, ಜಿಂಜೂರಿ ಟ್ರೇಡಿಂಗ್ ಕಂಪನಿ ಮಾಲೀಕರು, ಕಲ್ಯಾಣಿ ಸಾಹೇಬರು, ಆಂಜನೇಯ ಕಟಗಿ ಹಾಗೂ ಶಿವಯ್ಯ ನಲ್ವತಮಠ ಉಪಸ್ಥಿತರಿದ್ದರು.

ಗದಗ ಉತ್ಸವವು ಜಿಲ್ಲೆಯ ಕಲೆ, ಸಂಸ್ಕೃತಿ, ಪರಂಪರೆ ಹಾಗೂ ಪ್ರವಾಸೋದ್ಯಮವನ್ನು ಮತ್ತಷ್ಟು ಪರಿಚಯಿಸುವ ವೇದಿಕೆಯಾಗಬೇಕು ಎಂಬ ಆಶಯದೊಂದಿಗೆ ವ್ಯಾಪಾರಸ್ಥರಿಗೆ ಉತ್ಸವದ ಕುರಿತು ಮಾಹಿತಿ ನೀಡಲಾಯಿತು.

ಉತ್ಸವದ ಯಶಸ್ಸಿಗೆ ಅಗತ್ಯ ಸಹಕಾರ ನೀಡುವುದಾಗಿ ಎ.ಪಿ.ಎಂ.ಸಿ.ಯ ಮೆಣಸಿನಕಾಯಿ ವ್ಯಾಪಾರಸ್ಥರು ಈ ಸಂದರ್ಭದಲ್ಲಿ ಭರವಸೆ ನೀಡಿದರು.

## ಗದಗ ಉತ್ಸವಕ್ಕೆ ಶ್ರೀ ಈರಣ್ಣ ಸೊನ್ನದ ಅವರಿಗೆ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ವತಿಯಿಂದ ಶ್ರೀ ಈರಣ್ಣ ಸೊನ್ನದ ಗಜೇಂದ್ರಗಡ ಪ್ರಶಸ್ತಿ' ಪುರಸ್ಕೃತರಾದ ಈರಣ್ಣ ಸೊನ್ನದ ಅವರನ್ನು ಆಗಸ್ಟ್ 14ರಿಂದ 18ರವರೆಗೆ ನಡೆಯಲಿರುವ ಗದಗ ಉತ್ಸವ2026ಕ್ಕೆ ಆಹ್ವಾನಿಸಲಾಯಿತು. ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ಹಾಗೂ ಕಾರ್ಯದರ್ಶಿ ಚನ್ನವೀರಪ್ಪ ಹುಣಸಿಕಟ್ಟಿ ಅವರು ಈರಣ್ಣ ಸೊನ್ನದ ಅವರನ್ನು ಭೇಟಿಯಾಗಿ ಉತ್ಸವಕ್ಕೆ ಆಹ್ವಾನ ನೀಡಿದರು. ಈ ಸಂದರ್ಭದಲ್ಲಿ ಬಸವರಾಜ ಪುರುಗೇರಿ, ಈರಣ್ಣ ಇಂಡಿ, ರಮಣ್ಣ ಸೊನ್ನದ ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ಮೊದಲ ಆರು ತಿಂಗಳು ಎದೆಹಾಲು ಹೊರತುಪಡಿಸಿ ಬೇರೆ ಆಹಾರದ್ರವ ಬೇಡ

# ತಾಯಿಯ ಹಾಲು ಮಗುವಿಗೆ ಅಮೃತ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ತಾಯಿಯ ಹಾಲು ಮಗುವಿಗೆ, ಆಕಳ ಹಾಲು ಕರುವಿಗೆ ಎಂಬ ಗಾದೆಯಂತೆ, ಮಗುವಿನ ಆರೋಗ್ಯಕರ ಬೆಳವಣಿಗೆಗೆ ತಾಯಿಯ ಎದೆಹಾಲೇ ಅತ್ಯುತ್ತಮ ಆಹಾರವಾಗಿದೆ. ಸಾಧ್ಯವಾದಷ್ಟು ಎರಡು ವರ್ಷಗಳವರೆಗೆ ಮಗುವಿಗೆ ಎದೆಹಾಲು ನೀಡಬೇಕು ಎಂದು ಸಮುದಾಯ ಆರೋಗ್ಯಾಧಿಕಾರಿ ಸಂತೋಷ್ ರಾಠೋಡ ಹೇಳಿದರು. ಸಮೀಪದ ಜಕ್ಕಲಿ ಗ್ರಾಮದಲ್ಲಿ ಸ್ತನ್ಯಪಾನ ಸಪ್ತಾಹದ ಅಂಗವಾಗಿ ಶುಕ್ರವಾರ ಗರ್ಭಿಣಿಯರು ಹಾಗೂ ಬಾಣಂತಿಯರಿಗಾಗಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಗು ಜನಿಸಿದ ತಕ್ಷಣ ದೊರೆಯುವ ಕೊಲೊಸ್ಟ್ರಮ್ (ಗಿಣ್ಣು ಹಾಲು) ಪೌಷ್ಟಿಕಾಂಶ ಹಾಗೂ ರೋಗನಿರೋಧಕ ಗುಣಗಳಿಂದ ಸಮೃದ್ಧವಾಗಿದ್ದು, ಮಗುವಿನ ಆರೋಗ್ಯಕ್ಕೆ ಅತ್ಯಂತ ಪ್ರಯೋಜನಕಾರಿಯಾಗಿದೆ. ಹೀಗಾಗಿ ಗಿಣ್ಣು ಹಾಲನ್ನು ಯಾವುದೇ ಕಾರಣಕ್ಕೂ ತ್ಯಜಿಸಬಾರದು. ಮಗುವಿನ ಮೊದಲ ಆರು ತಿಂಗಳವರೆಗೆ ತಾಯಿಯ ಎದೆಹಾಲನ್ನು ಹೊರತುಪಡಿಸಿ ನೀರು ಸೇರಿದಂತೆ ಯಾವುದೇ ಆಹಾರ ಅಥವಾ ದ್ರವ ನೀಡಬಾರದು ಎಂದು ಸಲಹೆ ನೀಡಿದರು.

ಗರ್ಭಿಣಿಯರು ಹಾಗೂ ಬಾಣಂತಿಯರು ತಮ್ಮ ಆರೋಗ್ಯದ ಬಗ್ಗೆಯೂ ಕಾಳಜಿ ವಹಿಸಿ, ಸಮತೋಲನದ ಹಾಗೂ ಪೌಷ್ಟಿಕ ಆಹಾರ ಸೇವಿಸಬೇಕು. ತಾಯಿ ಆರೋಗ್ಯವಾಗಿದ್ದಾಗಲೇ ಮಗುವಿನ ಆರೋಗ್ಯಕರ ಬೆಳವಣಿಗೆ ಸಾಧ್ಯ ಎಂದರು. ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಸಾವಿತ್ರಿ ಹಿರೆವಡೆಯರ ಮಾತನಾಡಿ, ತಾಯಿಯ ಎದೆಹಾಲಿನಲ್ಲಿ ಮಗುವಿನ ಬೆಳವಣಿಗೆಗೆ ಅಗತ್ಯವಾದ ಪೌಷ್ಟಿಕಾಂಶಗಳಿದ್ದು, ರೋಗನಿರೋಧಕ ಶಕ್ತಿ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ತಾಯಂದಿರು ಮಗುವಿನ ಆರೈಕೆ, ಸ್ವಚ್ಛತೆ ಹಾಗೂ ಪೌಷ್ಟಿಕ ಆಹಾರದ ಬಗ್ಗೆ ಹೆಚ್ಚಿನ ಗಮನ ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಆಶಾ ಕಾರ್ಯಕರ್ತೆಯರು, ಸ್ತ್ರೀಶಕ್ತಿ ಸಂಘದ ಸದಸ್ಯರು ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಉಪಸ್ಥಿತರಿದ್ದರು. ಗರ್ಭಿಣಿಯರು ಮತ್ತು ಬಾಣಂತಿಯರಿಗೆ ಸ್ತನ್ಯಪಾನದ ಮಹತ್ವ, ಶಿಶು ಆರೈಕೆ ಹಾಗೂ ತಾಯಿಮಗುವಿನ ಆರೋಗ್ಯದ ಕುರಿತು ಮಾಹಿತಿ ಮತ್ತು ಮಾರ್ಗದರ್ಶನ ನೀಡಲಾಯಿತು.

## ಆಟೋ ಚಾಲಕರಿಗೆ ಸಮವಸ್ತ್ರ ವಿತರಣೆ

**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ 39 ಜೈಭೀಮ್ ಆಟೋ ಚಾಲಕರು ಹಾಗೂ ಮಾಲೀಕರಿಗೆ ಉಸಿರು ಫೌಂಡೇಶನ್ ವತಿಯಿಂದ ಸಮವಸ್ತ್ರ ವಿತರಿಸಲಾಯಿತು.

ಸಮವಸ್ತ್ರ ವಿತರಿಸಿ ಮಾತನಾಡಿದ ಉಸಿರು ಫೌಂಡೇಶನ್ ಅಧ್ಯಕ್ಷ ಶರಣು ಪಾಟೀಲ, ಆಟೋ ಚಾಲಕರು ಪ್ರಾಮಾಣಿಕವಾಗಿ ಸೇವೆ ಸಲ್ಲಿಸುವವರಾಗಿದ್ದು, ಅವರ ಹಿತ ಕಾಯುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಆಟೋ ಚಾಲಕರು ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು ಬದುಕುತ್ತಿದ್ದು, ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಮೂಲಕ ನಾಡಿನ ಉತ್ತಮ ಪ್ರಜೆಗಳನ್ನಾಗಿ ರೂಪಿಸಬೇಕು ಎಂದರು. ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನ ರಚಿಸುವ ಮೂಲಕ ಎಲ್ಲರಿಗೂ ಸ್ವಾತಂತ್ರ್ಯ ಹಾಗೂ ಸಮಾನತೆಯ ಬದುಕು ಕಟ್ಟಿಕೊಟ್ಟಿದ್ದಾರೆ. ಸಮಸಮಾಜ ನಿರ್ಮಾಣದ ಗುರಿ ಹೊಂದಿದ್ದ ಅವರ ತತ್ವಸಿದ್ಧಾಂತಗಳನ್ನು ನಾವೆಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ನಿಂಗಪ್ಪ ಬೂಷಿ ಮಾತನಾಡಿ, ಉಸಿರು ಫೌಂಡೇಶನ್ ವತಿಯಿಂದ ನಿರ್ಗತಿಕರು, ಹಿಂದುಳಿದವರು ಹಾಗೂ ಕಡುಬಡವರಿಗೆ ನಿರಂತರವಾಗಿ ಸಹಾಯಹಸ್ತ ನೀಡಲಾಗುತ್ತಿದೆ. ಶರಣು ಪಾಟೀಲ ಅವರ ಸಾಮಾಜಿಕ ಕಾರ್ಯ ಶ್ಲಾಘನೀಯವಾಗಿದೆ ಎಂದರು. ಈ ಸಂದರ್ಭದಲ್ಲಿ ಸುಭಾಷ ದೊಡ್ಡಮನಿ, ವಿ.ಡಿ. ಕಣವಿ, ದೇವಪ್ಪ ಅಣ್ಣಿಗೇರಿ, ಬುದ್ದಪ್ಪ ಮಾಡಳ್ಳಿ, ಬಸವಣ್ಣೆಪ್ಪ ನಡಗೇರಿ, ಮಹಾಂತೇಶ ಕಣವಿ, ಸಿ.ಎಸ್. ಪತ್ರಿ, ಅಮಜಾದ ನರಗುಂದ, ಸುರೇಶ ರಾಮಣ್ಣವರ, ಪರಶುರಾಮ ದೊಡ್ಡಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಎಸ್‌ಸಿಎಸ್‌ಟಿ ಸಮುದಾಯದ ಸಮಸ್ಯೆಗಳ ಕುರಿತು ಸಚಿವ ರಾಯರೆಡ್ಡಿಗೆ ಜೈ ಭೀಮ್ ಸಂಘರ್ಷ ಸಮಿತಿ ಮನವಿ

## ವಿದ್ಯಾರ್ಥಿ, ಪೌರಕಾರ್ಮಿಕರ ಸಮಸ್ಯೆ ಪರಿಹರಿಸಲು ಆಗ್ರಹ

**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳು, ಪೌರಕಾರ್ಮಿಕರು ಹಾಗೂ ಎಸ್‌ಸಿಎಸ್‌ಟಿ ಸಮುದಾಯ ಎದುರಿಸುತ್ತಿರುವ ವಿವಿಧ ಸಮಸ್ಯೆಗಳನ್ನು ತಕ್ಷಣ ಪರಿಹರಿಸುವಂತೆ ಆಗ್ರಹಿಸಿ ಜೈ ಭೀಮ್ ಸಂಘರ್ಷ ಸಮಿತಿ ಗದಗ ಜಿಲ್ಲಾ ಘಟಕದ ವತಿಯಿಂದ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ ಅವರಿಗೆ ಮನವಿ ಸಲ್ಲಿಸಲಾಯಿತು.

ಜೈ ಭೀಮ್ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಗಣೇಶ ವಾಯ್. ಹುಬ್ಬಳ್ಳಿ ಅವರ ನೇತೃತ್ವದಲ್ಲಿ ಜಿಲ್ಲಾಡಳಿತ ಭವನದಲ್ಲಿ ಸಚಿವರಿಗೆ ಮನವಿ ಸಲ್ಲಿಸಲಾಯಿತು.

ಗ್ರಾಮೀಣ ಭಾಗದ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಸಮರ್ಪಕ ಬಸ್ ವ್ಯವಸ್ಥೆ ಇಲ್ಲದೆ ತೊಂದರೆಯಾಗುತ್ತಿದೆ. ಇದರಿಂದ ವಿದ್ಯಾರ್ಥಿಗಳು ಸಮಯಕ್ಕೆ ಸರಿಯಾಗಿ ಶಾಲಾ-ಕಾಲೇಜುಗಳಿಗೆ ತೆರಳಲು ಸಾಧ್ಯವಾಗುತ್ತಿಲ್ಲ. ವಿದ್ಯಾರ್ಥಿಗಳ ಪ್ರೈಜ್ ಮನಿ ಹಾಗೂ ವಿದ್ಯಾರ್ಥಿವೇತನದ ಸಮಸ್ಯೆಗಳನ್ನು ಪರಿಹರಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಜಿಲ್ಲೆಯಲ್ಲಿ ದಲಿತರ ಮೇಲಿನ ದೌರ್ಜನ್ಯ ಹಾಗೂ ಅಸ್ಪೃಶ್ಯತೆ ಇನ್ನೂ ಸಂಪೂರ್ಣವಾಗಿ ನಿವಾರಣೆಯಾಗಿಲ್ಲ. ಈ ಕುರಿತು ಕಟ್ಟುನಿಟ್ಟಿನ ಕ್ರಮ ಕೈಗೊಂಡು, ಎಸ್‌ಸಿಎಸ್‌ಟಿ ಸಮುದಾಯದ ಹಕ್ಕುಗಳು ಹಾಗೂ ಸೌಲಭ್ಯಗಳು ಅರ್ಹರಿಗೆ ತಲುಪುವಂತೆ ಮಾಡಬೇಕು ಎಂದು ಆಗ್ರಹಿಸಿದರು.

ಪೌರಕಾರ್ಮಿಕರ ಸಮಸ್ಯೆಗಳಿಗೂ ಆದ್ಯತೆ ನೀಡಬೇಕು. ಹೊರಗುತ್ತಿಗೆ ಪೌರಕಾರ್ಮಿಕರನ್ನು ಖಾಯಂಗೊಳಿಸುವ ಪ್ರಕ್ರಿಯೆ ಕೈಗೊಳ್ಳಬೇಕು. ಪೌರಕಾರ್ಮಿಕರಿಗೆ ಮನೆ ನಿರ್ಮಾಣಕ್ಕೆ ನೀಡಲಾಗುತ್ತಿದ್ದ ಗೃಹಭಾಗ್ಯ ಯೋಜನೆ ಸ್ಥಗಿತಗೊಂಡಿದ್ದು, ಮತ್ತೆ ಅನುದಾನ ಕಲ್ಪಿಸಬೇಕು. ಸ್ವಂತ ಮನೆ ಇಲ್ಲದ ಪೌರಕಾರ್ಮಿಕರಿಗೆ ಪ್ರತ್ಯೇಕ ನಿವೇಶನ ಅಥವಾ ಜಾಗ ಮಂಜೂರು ಮಾಡಬೇಕು ಎಂದು ಮನವಿ ಮಾಡಿದರು. ಇದರೊಂದಿಗೆ ದೇವದಾಸಿಯರ ಸಮಸ್ಯೆ, ಗದಗ-ಬೆಟಗೇರಿ ಅವಳಿ ನಗರದ ಕುಡಿಯುವ ನೀರು, ರಸ್ತೆ ಹಾಗೂ ಒಳಚರಂಡಿ ಸಮಸ್ಯೆಗಳನ್ನು ಪರಿಹರಿಸುವಂತೆಯೂ ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಸಮಿತಿಯ ಉಪಾಧ್ಯಕ್ಷ ಮಂಜುನಾಥ ಎಫ್. ತೌಜಲ್, ಆಮ್ ಆದ್ಮಿ ಪಕ್ಷದ ಜಿಲ್ಲಾಧ್ಯಕ್ಷ ಡಾ. ದಾದಾಪೀರ ಕಲೆಗಾರ, ರೋಣ ತಾಲೂಕು ಅಧ್ಯಕ್ಷ ಬಸವರಾಜ ಬದಾಮಿ, ಅಲ್ಪಸಂಖ್ಯಾತರ ಘಟಕದ ಜಿಲ್ಲಾಧ್ಯಕ್ಷ ರಾಷ್ಟ್ರೀನ್ ಜೋಸೆಫ್, ಉಪಾಧ್ಯಕ್ಷ ರಾಜೇಶ ವಿ. ಶೆಟ್ಟರ್, ಯುವ ಘಟಕದ ಜಿಲ್ಲಾಧ್ಯಕ್ಷ ಇಮಾಮಹುಸೇನ ಕುನ್ನಿಬಾವಿ, ಕಾರ್ಯದರ್ಶಿ ಸಮೀರಅಹ್ಮದ ಕುನ್ನಿಬಾವಿ, ಬಾಬು ಬಳ್ಳಾರಿ, ಮಂಜುನಾಥ ಸಂದಿಮನಿ, ಪ್ರೇಮಕುಮಾರ ಹುಬ್ಬಳ್ಳಿ, ಮಂಜುನಾಥ ಸುಂಕದ, ಶ್ರೀಕಾಂತ ಹಲವಾಗಲಿ, ಹೇಮಂತ ಹುಬ್ಬಳ್ಳಿ, ವಿರುಪಾಕ್ಷ ಗೌಡರ, ಗಿರೀಶ ಚಳಗೇರಿ, ರಫೀಕ ನವಲಗುಂದ, ಫರದೀನ ಕಾಟಾಪುರ, ಮಲ್ಲೇಶ ಮೇಳದಾಳಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ವಿದ್ಯಾರ್ಥಿಗಳು, ಪೌರಕಾರ್ಮಿಕರು ಹಾಗೂ ಎಸ್‌ಸಿಎಸ್‌ಟಿ ಸಮುದಾಯದ ಸಮಸ್ಯೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ, ಅರ್ಹರಿಗೆ ಸಿಗಬೇಕಾದ ಸೌಲಭ್ಯಗಳನ್ನು ತ್ವರಿತವಾಗಿ ಒದಗಿಸಬೇಕು.
> – ಗಣೇಶ ವಾಯ್. ಹುಬ್ಬಳ್ಳಿ,
> ಜಿಲ್ಲಾಧ್ಯಕ್ಷರು, ಜೈ ಭೀಮ್ ಸಂಘರ್ಷ ಸಮಿತಿ

### ಗದಗ ಜಿಲ್ಲೆಯಲ್ಲಿ ಶೇ.32ರಷ್ಟು ಮಳೆ ಕೊರತೆ | ಅರ್ಹ ರೈತರಿಗೆ ಪರಿಹಾರ ತಲುಪಿಸಲು ಸಚಿವ ರಾಯರಡ್ಡಿ ಸೂಚನೆ

# ನರಗುಂದದಲ್ಲಿ ಶೇ.70-75ರಷ್ಟು ಬೆಳೆ ಹಾನಿ ಅಂದಾಜು




**ವಿಜಯಸಾಕ್ಷಿ ಸುದ್ದಿ, ನರಗುಂದ**

ಗದಗ ಜಿಲ್ಲೆ ಬರ ಪರಿಸ್ಥಿತಿಯನ್ನು ಎದುರಿಸುತ್ತಿದ್ದು, ಜಿಲ್ಲೆಯಲ್ಲಿ ವಾಡಿಕೆ ಮಳೆಗಿಂತ ಶೇ.32ರಷ್ಟು ಮಳೆ ಕೊರತೆಯಾಗಿದೆ. ನರಗುಂದ ತಾಲ್ಲೂಕಿನಲ್ಲಿ ಮಣ್ಣಿನ ತೇವಾಂಶದ ಕೊರತೆಯಿಂದ ಒಟ್ಟಾರೆ ಶೇ.70ರಿಂದ 75ರಷ್ಟು ಬೆಳೆ ಹಾನಿಯಾಗಿರುವ ಅಂದಾಜು ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನರಗುಂದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಭಾನುವಾರ ನಡೆದ ಬರ ಪರಿಸ್ಥಿತಿ ಅವಲೋಕನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಪುಟ ದರ್ಜೆ ಸಚಿವ ಬಸವರಾಜ ರಾಯರಡ್ಡಿ, ಬೆಳೆ ಹಾನಿಯ ನಿಖರ ಹಾಗೂ ವಾಸ್ತವಿಕ ಸಮೀಕ್ಷೆ ನಡೆಸಿ, ಅರ್ಹ ಪ್ರತಿಯೊಬ್ಬ ರೈತನಿಗೂ ಸರ್ಕಾರದ ಪರಿಹಾರ ತಲುಪುವಂತೆ ಅಧಿಕಾರಿಗಳು ವರದಿ ಸಿದ್ಧಪಡಿಸಬೇಕು ಎಂದು ಸೂಚಿಸಿದರು.

ತಾಲ್ಲೂಕಿನ ವಾಡಿಕೆ ಬಿತ್ತನೆ ಕ್ಷೇತ್ರ 99,052 ಎಕರೆ ಇದ್ದು, ಸುಮಾರು 87 ಸಾವಿರ ಎಕರೆ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಇದರಲ್ಲಿ 53 ಸಾವಿರ ಎಕರೆ ಪ್ರದೇಶದಲ್ಲಿ ಹೆಸರು ಬಿತ್ತನೆಯಾಗಿದ್ದು, ಸುಮಾರು 40 ಸಾವಿರ ಎಕರೆ ಪ್ರದೇಶದ ಹೆಸರು ಬೆಳೆ ಹಾನಿಗೊಳಗಾಗಿದೆ ಎಂದು ಸಭೆಗೆ ಮಾಹಿತಿ ನೀಡಲಾಯಿತು.

ಕೃಷಿ ಬೆಳೆಗಳಿಗೆ ಅಂದಾಜು ₹51.61 ಕೋಟಿ ನಷ್ಟ ಸಂಭವಿಸಿದ್ದು, ತೋಟಗಾರಿಕೆ ಬೆಳೆಗಳ ಪೈಕಿ ಸುಮಾರು 1,806 ಎಕರೆ ಪ್ರದೇಶದ ಈರುಳ್ಳಿ ಹಾಗೂ ಮೆಣಸಿನಕಾಯಿ ಬೆಳೆ ಹಾನಿಗೊಳಗಾಗಿದೆ. ಇದರಿಂದ ಅಂದಾಜು ₹1.31 ಕೋಟಿ ನಷ್ಟ ಸಂಭವಿಸಿದೆ ಎಂದು ಅಧಿಕಾರಿಗಳು ತಿಳಿಸಿದರು.

**ಪ್ರತಿ ಹೆಕ್ಟೇರ್‌ಗೆ ₹8,500ರವರೆಗೆ ಪರಿಹಾರ**

ಎನ್‌ಡಿಆರ್‌ಎಫ್ ಮಾರ್ಗಸೂಚಿಗಳ ಪ್ರಕಾರ ಪ್ರತಿ ಹೆಕ್ಟೇರ್‌ಗೆ ₹8,500ರವರೆಗೆ ಪರಿಹಾರ ನೀಡಲು ಅವಕಾಶವಿದ್ದು, ಯಾವುದೇ ಅರ್ಹ ರೈತ ಪರಿಹಾರದಿಂದ ವಂಚಿತರಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಸಚಿವರು ಸೂಚಿಸಿದರು.

ನೀರಾವರಿ ಪ್ರದೇಶ ಹಾಗೂ ವಾಣಿಜ್ಯ ಮತ್ತು ಇತರೆ ಪ್ರದೇಶಗಳಲ್ಲಿ ಬೆಳೆದ ಬೆಳೆಗಳಿಗೂ ಪರಿಹಾರ ದೊರಕಿಸುವ ಕುರಿತು ಸರ್ಕಾರದ ಮಟ್ಟದಲ್ಲಿ ಅಗತ್ಯ ಪ್ರಯತ್ನ ನಡೆಸಲಾಗುವುದು. ಫಸಲ್ ಬೀಮಾ ಯೋಜನೆಯಡಿ ಅರ್ಹ ರೈತರಿಗೆ ಪರಿಹಾರ ದೊರಕುವಂತೆ ಕ್ರಮ ಕೈಗೊಳ್ಳಬೇಕು ಎಂದರು.

**ಖಾತ್ರಿ ಯೋಜನೆಯಡಿ ಹೆಚ್ಚಿನ ಉದ್ಯೋಗ ಸೃಷ್ಟಿಗೆ ಸೂಚನೆ:** ಬರ ಪರಿಸ್ಥಿತಿಯಿಂದ ಗ್ರಾಮೀಣ ಕೂಲಿ ಕಾರ್ಮಿಕರಿಗೂ ತೊಂದರೆಯಾಗಿರುವ ಹಿನ್ನೆಲೆಯಲ್ಲಿ ಖಾತ್ರಿ ಯೋಜನೆಯಡಿ ಹೆಚ್ಚಿನ ಮಾನವ ದಿನಗಳ ಉದ್ಯೋಗ ಸೃಷ್ಟಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ತಾಲ್ಲೂಕಿನಲ್ಲಿ 13,834 ಜಾಬ್ ಕಾರ್ಡ್‌ಗಳಿದ್ದು, 8,830 ಸಕ್ರಿಯ ಜಾಬ್ ಕಾರ್ಡ್‌ಗಳಿವೆ. ಇದುವರೆಗೆ 22,751 ಮಾನವ ದಿನಗಳ ಉದ್ಯೋಗ ಸೃಷ್ಟಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಲಾಯಿತು.

ನರಗುಂದ ಪಟ್ಟಣದ ಕುಡಿಯುವ ನೀರು ಸರಬರಾಜು ವ್ಯವಸ್ಥೆ ಕುರಿತು ಚರ್ಚಿಸಿದ ಸಚಿವರು, ಅಗತ್ಯ ಕಾಮಗಾರಿಗಳಿಗೆ ಕೂಡಲೇ ಪ್ರಸ್ತಾವನೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಪಟ್ಟಣಕ್ಕೆ ಪ್ರತಿದಿನ ಸುಮಾರು 45 ಲಕ್ಷ ಲೀಟರ್ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದರು. ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ನರಗುಂದ ತಾಲ್ಲೂಕನ್ನೂ ಬರಪೀಡಿತ ಪ್ರದೇಶವೆಂದು ಘೋಷಿಸುವ ನಿಟ್ಟಿನಲ್ಲಿ ಸಚಿವರು ಕಾಳಜಿ ವಹಿಸಿರುವುದು ರೈತರಿಗೆ ನೆಮ್ಮದಿ ತಂದಿದೆ ಎಂದರು. ಫಸಲ್ ಬೀಮಾ ಪರಿಹಾರ ಮೊತ್ತ ಕೆಲವೆಡೆ ಏಜೆಂಟರ ಜಾಲದ ಮೂಲಕ ದುರ್ಬಳಕೆಯಾಗುತ್ತಿರುವ ಆರೋಪಗಳಿದ್ದು, ಈ ಬಗ್ಗೆ ಪರಿಶೀಲನೆ ನಡೆಸಿ ಅರ್ಹ ರೈತರಿಗೆ ಮಾತ್ರ ಪರಿಹಾರ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸಭೆಯಲ್ಲಿ ಗ್ಯಾರಂಟಿ ಸಮಿತಿ ಅಧ್ಯಕ್ಷ ವಿವೇಕ ಯಾವಗಲ್, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಸಹಾಯಕ ಆಯುಕ್ತ ಗಂಗಪ್ಪ ಎಂ., ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ, ತೋಟಗಾರಿಕೆ ಜಂಟಿ ನಿರ್ದೇಶಕ ಚಿದಾನಂದ, ತಹಶೀಲ್ದಾರ ಶ್ರೀಶೈಲ ತಳವಾರ, ಇಒ ಶ್ರೀಧರ್ ಚಿನಗುಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> ಬೆಳೆ ಹಾನಿಯ ನಿಖರ ಹಾಗೂ ವಾಸ್ತವಿಕ ಸಮೀಕ್ಷೆ ನಡೆಸಿ ವರದಿ ಸಲ್ಲಿಸಬೇಕು. ಯಾವುದೇ ಅರ್ಹ ರೈತ ಸರ್ಕಾರದ ಪರಿಹಾರದಿಂದ ವಂಚಿತರಾಗದಂತೆ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು.
> – ಬಸವರಾಜ ರಾಯರಡ್ಡಿ,
> ಸಂಪುಟ ದರ್ಜೆ ಸಚಿವ

## ವಿದ್ಯುತ್ ಸ್ಪರ್ಶಕ್ಕೆ ನವಿಲು ಸಾವು;

### ತಿನ್ನಲು ಹೋದ ಚಿರತೆಗೂ ವಿದ್ಯುತ್ ಶಾಕ್!



**ವಿಜಯಸಾಕ್ಷಿ ಸುದ್ದಿ, ಚಿತ್ರದುರ್ಗ**

ವಿದ್ಯುತ್ ಸ್ಪರ್ಶಿಸಿ ನವಿಲು ಮೃತಪಟ್ಟಿದ್ದು, ಅದನ್ನು ತಿನ್ನಲು ಹೋದ ಚಿರತೆಯೂ ವಿದ್ಯುತ್ ಸ್ಪರ್ಶದಿಂದ ಮೃತಪಟ್ಟಿರುವ ಘಟನೆ ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲ್ಲೂಕಿನ ಕಬ್ಬಿನಕೆರೆ ಗ್ರಾಮದಲ್ಲಿ ನಡೆದಿದೆ.

ಕಬ್ಬಿನಕೆರೆ ಗ್ರಾಮದ ಕುಡಿಯುವ ನೀರಿನ ವಿದ್ಯುತ್ ಪರಿವರ್ತಕದ ಬಳಿ ನವಿಲು ವಿದ್ಯುತ್ ಸ್ಪರ್ಶಕ್ಕೆ ಒಳಗಾಗಿ ಮೃತಪಟ್ಟಿತ್ತು. ನವಿಲನ್ನು ತಿನ್ನಲು ಬಂದ ಚಿರತೆ ಟ್ರಾನ್ಸ್‌ಫಾರ್ಮರ್ ಮೇಲೇರಿದ್ದು, ಅಲ್ಲಿಯೇ ವಿದ್ಯುತ್ ಸ್ಪರ್ಶದಿಂದ ಮೃತಪಟ್ಟಿದೆ.

ಘಟನೆ ತಿಳಿದು ಸ್ಥಳಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ನವಿಲು ಹಾಗೂ ಚಿರತೆಯ ಮೃತದೇಹಗಳನ್ನು ತೆರವುಗೊಳಿಸುವ ಕಾರ್ಯ ಕೈಗೊಳ್ಳಲಾಯಿತು. ಈ ಘಟನೆ ಹೊಸದುರ್ಗ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

## ಕಲೆ, ಸಂಸ್ಕೃತಿಯಿಂದ ಪ್ರತಿಭೆ ಅನಾವರಣ: ಶಿವನಗೌಡ ಗೌಡರ

**ವಿಜಯಸಾಕ್ಷಿ ಸುದ್ದಿ, ಗದಗ**

ಕೃಷಿ ಚಟುವಟಿಕೆಗಳ ಒತ್ತಡದ ನಡುವೆ ಜನಪದ ಕಲೆ, ಸಂಗೀತ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಮನಸ್ಸಿಗೆ ನೆಮ್ಮದಿ ನೀಡುವುದರ ಜೊತೆಗೆ ನಮ್ಮ ಸಂಸ್ಕೃತಿಯನ್ನು ಉಳಿಸುತ್ತವೆ ಎಂದು ಶಿವನಗೌಡ ಆರ್. ಗೌಡರ ಹೇಳಿದರು.

ಗದಗ ತಾಲೂಕಿನ ಚಿಕ್ಕಹಂದಿಗೋಳ ಗ್ರಾಮದಲ್ಲಿ ಶ್ರೀ ಅನ್ನಪೂರ್ಣೇಶ್ವರಿ ಮಹಿಳಾ ವಿವಿಧೋದ್ದೇಶಗಳ ಸಂಘದ ಆಶ್ರಯದಲ್ಲಿ ನಡೆದ ಸಾಧಕರ ಸನ್ಮಾನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಗ್ರಾಮೀಣ ಭಾಗದ ಪ್ರತಿಭೆಗಳಿಗೆ ಸೂಕ್ತ ವೇದಿಕೆ ಕಲ್ಪಿಸಿದಾಗ ಅವರಲ್ಲಿರುವ ಕಲೆ ಹಾಗೂ ಪ್ರತಿಭೆ ಅನಾವರಣಗೊಳ್ಳುತ್ತದೆ. ಜನಪದ ಕಲೆಗಳು ನಮ್ಮ ಗ್ರಾಮೀಣ ಬದುಕಿನ ಅವಿಭಾಜ್ಯ ಭಾಗವಾಗಿದ್ದು, ಅವುಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು.

ಸುರೇಶ ವಿರಕ್ತಮಠ ಮಾತನಾಡಿ, ಪ್ರತಿಯೊಬ್ಬರಲ್ಲೂ ಪ್ರತಿಭೆ ಇದ್ದು, ಅದನ್ನು ಹೊರತರಲು ಸೂಕ್ತ ವೇದಿಕೆ ಅಗತ್ಯ ಎಂದರು. ವಾಣಿಶ್ರೀ ಸಂಗಮೇಶ ಗದ್ದಿ ಅವರು ಆತ್ಮಸ್ಥೈರ್ಯ, ಏಕಾಗ್ರತೆ ಹಾಗೂ ಶಿಸ್ತು ಸಾಧನೆಗೆ ಪ್ರಮುಖ ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳು, ರೈತರು, ಕಲಾವಿದರು ಹಾಗೂ ಸೈನಿಕರನ್ನು ಸನ್ಮಾನಿಸಲಾಯಿತು. ಬಳಿಕ ವಚನ ಸಂಗೀತ, ಜನಪದ ಗೀತೆ, ಭಕ್ತಿಗೀತೆ, ತತ್ವಪದ, ಭರತನಾಟ್ಯ, ಜನಪದ ನೃತ್ಯ ಹಾಗೂ ಯೋಗನೃತ್ಯ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿರುಪಾಕ್ಷಗೌಡ ಗೌಡರ ವಹಿಸಿದ್ದರು. ಸಂಘದ ಅಧ್ಯಕ್ಷೆ ಶೋಭಾ ಅಸುಂಡಿ ಸೇರಿದಂತೆ ಗಣ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

### ಹಳೆಯ ವಿದ್ಯಾರ್ಥಿಗಳು ಶಾಲೆಯೊಂದಿಗೆ ನಿರಂತರ ಸಂಪರ್ಕದಲ್ಲಿರಿ: ಹಾಲಕೆರೆ ಶ್ರೀಗಳು

# ಗುರುಗಳ ಋಣ, ಸ್ನೇಹದ ಬಂಧ ಜೀವನಪರ್ಯಂತ ಉಳಿಯಲಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸ್ನೇಹದಲ್ಲಿ ಅಧಿಕಾರ, ಅಂತಸ್ತು, ಶ್ರೇಷ್ಠಕನಿಷ್ಠ ಎಂಬ ಭಾವನೆಗಳಿಗೆ ಅವಕಾಶವಿರಬಾರದು. ಬಾಲ್ಯದಲ್ಲಿ ಬೆಳೆಸಿಕೊಂಡ ಸ್ನೇಹದ ಬಂಧ ಜೀವನದ ಕೊನೆಯ ಉಸಿರಿನವರೆಗೂ ಉಳಿಯಬೇಕು ಎಂದು ಹಾಲಕೆರೆ ಅನ್ನದಾನೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಜಗದ್ಗುರು ಮುಪ್ಪಿನ ಬಸವಲಿಂಗ ಸ್ವಾಮೀಜಿ ಹೇಳಿದರು.

ಸಮೀಪದ ನಿಡಗುಂದಿಯ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯಲ್ಲಿ 200304ನೇ ಸಾಲಿನ ಹಳೆಯ ವಿದ್ಯಾರ್ಥಿಗಳ ವತಿಯಿಂದ ಶನಿವಾರ ಆಯೋಜಿಸಿದ್ದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಒಂದೇ ಶಾಲೆಯ ಮೈದಾನದಲ್ಲಿ ಆಟವಾಡಿ, ಪಾಠ ಕಲಿತು ಬಾಲ್ಯದ ದಿನಗಳನ್ನು ಕಳೆದ ವಿದ್ಯಾರ್ಥಿಗಳು ಇಂದು ರೈತರು, ಶಿಕ್ಷಕರು, ವೈದ್ಯರು, ಎಂಜಿನಿಯರ್‌ಗಳು, ಗುತ್ತಿಗೆದಾರರು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಜೀವನದಲ್ಲಿ ಎಷ್ಟೇ ಎತ್ತರಕ್ಕೆ ಬೆಳೆದರೂ ಶಾಲಾ ದಿನಗಳ ಸ್ನೇಹ ಹಾಗೂ ಆತ್ಮೀಯತೆಯನ್ನು ಮರೆಯಬಾರದು. ವೃತ್ತಿ, ಸ್ಥಾನಮಾನ ಹಾಗೂ ಆರ್ಥಿಕ ಸ್ಥಿತಿಗತಿಗಳು ಸ್ನೇಹಕ್ಕೆ ಅಳತೆಗೋಲಾಗಬಾರದು ಎಂದರು.

ಹಲವು ವರ್ಷಗಳ ಬಳಿಕ ಹಳೆಯ ಸ್ನೇಹಿತರೆಲ್ಲ ಒಂದೆಡೆ ಸೇರಿ ತಮಗೆ ವಿದ್ಯೆ ಕಲಿಸಿದ ಗುರುಗಳನ್ನು ಗೌರವಿಸಿರುವುದು ಸಂತಸದ ಸಂಗತಿ. ಇಂತಹ ಸಮ್ಮಿಲನಗಳು ನಿರಂತರವಾಗಿ ನಡೆಯಬೇಕು. ಹಳೆಯ ವಿದ್ಯಾರ್ಥಿಗಳು ಶಾಲೆಯೊಂದಿಗೆ ಸಂಪರ್ಕದಲ್ಲಿದ್ದು, ಪ್ರಸ್ತುತ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ ಹಾಗೂ ಶಾಲೆಯ ಭೌತಿಕ ಅಭಿವೃದ್ಧಿಗೆ ತಮ್ಮ ಕೈಲಾದ ಸಹಕಾರ ನೀಡಬೇಕು ಎಂದು ಕರೆ ನೀಡಿದರು.

> ಹಳೆಯ ವಿದ್ಯಾರ್ಥಿಗಳೆಲ್ಲ ಹಲವು ವರ್ಷಗಳ ಬಳಿಕ ಒಂದೆಡೆ ಸೇರಿ ತಮಗೆ ವಿದ್ಯೆ ಕಲಿಸಿದ ಗುರುಗಳನ್ನು ಗೌರವಿಸಿರುವುದು ಸಂತಸದ ಸಂಗತಿ. ಇಂತಹ ಸಮ್ಮಿಲನಗಳು ನಿರಂತರವಾಗಿ ನಡೆಯಬೇಕು. ಹಳೆಯ ವಿದ್ಯಾರ್ಥಿಗಳು ಶಾಲೆಯೊಂದಿಗೆ ಸಂಪರ್ಕದಲ್ಲಿದ್ದು, ಪ್ರಸ್ತುತ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ ಹಾಗೂ ಶಾಲೆಯ ಅಭಿವೃದ್ಧಿಗೆ ಸಹಕಾರ ನೀಡಬೇಕು.
> – ಜಗದ್ಗುರು ಮುಪ್ಪಿನ ಬಸವಲಿಂಗ ಸ್ವಾಮೀಜಿ,
> ಹಾಲಕೆರೆ ಅನ್ನದಾನೇಶ್ವರ ಸಂಸ್ಥಾನ ಮಠ

ಅನ್ನದಾನ ಮಹಾಶಿವಯೋಗಿಗಳು ಗ್ರಾಮೀಣ ಹಾಗೂ ಬಡ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ದೊರೆಯಬೇಕೆಂಬ ಉದ್ದೇಶದಿಂದ ಈ ಭಾಗದಲ್ಲಿ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿದ್ದಾರೆ. ಅವರ ಶಿಕ್ಷಣ ಸೇವೆ ಹಾಗೂ ದೂರದೃಷ್ಟಿ ಇಂದಿಗೂ ಮಾದರಿಯಾಗಿದೆ. ಶಿಕ್ಷಣವು ಕೇವಲ ಅಂಕ ಗಳಿಸುವುದಕ್ಕೆ ಸೀಮಿತವಾಗದೆ, ವಿಚಾರಶಕ್ತಿ, ವಿವೇಕ ಹಾಗೂ ಜೀವನದ ಸವಾಲುಗಳನ್ನು ಎದುರಿಸುವ ಸಾಮರ್ಥ್ಯವನ್ನು ಬೆಳೆಸಬೇಕು ಎಂದರು.

ಗುರುಗಳು ವಿದ್ಯಾರ್ಥಿಗಳ ಶಿಸ್ತಿಗಾಗಿ ಕೆಲವೊಮ್ಮೆ ಶಿಕ್ಷೆ ನೀಡಿದ್ದರೂ, ಅದರ ಹಿಂದೆ ವಿದ್ಯಾರ್ಥಿಗಳ ಉತ್ತಮ ಭವಿಷ್ಯದ ಕಾಳಜಿ ಇರುತ್ತದೆ. ಹೀಗಾಗಿ ವಿದ್ಯಾರ್ಥಿಗಳು ತಮ್ಮ ಗುರುಗಳ ಸೇವೆ ಹಾಗೂ ಮಾರ್ಗದರ್ಶನವನ್ನು ಎಂದಿಗೂ ಮರೆಯಬಾರದು ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಎಸ್‌ಎವಿವಿಪಿ ಸಮಿತಿ ನರೇಗಲ್ಲನಿಡಗುಂದಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ನಿಡಗುಂದಿ ಪ್ರಾಚೀನ ಕಾಲದಿಂದಲೂ ಅಗ್ರಹಾರವಾಗಿ ಗುರುತಿಸಿಕೊಂಡಿದ್ದು, ಗ್ರಾಮೀಣ ಭಾಗದಲ್ಲಿ ಉತ್ತಮ ಶಿಕ್ಷಣ ನೀಡುವ ಪ್ರಮುಖ ಕೇಂದ್ರವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸ್ಥಾನಿಕ ಆಡಳಿತ ಮಂಡಳಿ ಚೇರ್ಮನ್ ಜಗದೀಶ ಕರಡಿ, ಶಾಲೆ ಹಾಗೂ ಶಿಕ್ಷಕರು ಸಮಾಜದಲ್ಲಿ ಪವಿತ್ರ ಸ್ಥಾನ ಹೊಂದಿದ್ದಾರೆ. ಹಳೆಯ ವಿದ್ಯಾರ್ಥಿಗಳು ಪ್ರಸ್ತುತ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಮಾರ್ಗದರ್ಶನ ನೀಡಬೇಕು ಎಂದರು.

ಶಾಖಾ ಶಿವಯೋಗ ಮಂದಿರ ನಿಡಗುಂದಿಕೊಪ್ಪ ಶ್ರೀಮಠದ ಅಭಿನವ ಚನ್ನಬಸವ ಸ್ವಾಮೀಜಿ ಮಾತನಾಡಿ, ಅನ್ನದಾನೇಶ್ವರ ಪ್ರೌಢಶಾಲೆಯಲ್ಲಿ ನಿರಂತರವಾಗಿ ಗುರುವಂದನಾ ಕಾರ್ಯಕ್ರಮಗಳು ನಡೆಯುತ್ತಿರುವುದು ಇಲ್ಲಿನ ಶಿಕ್ಷಣ ಪರಂಪರೆ ಹಾಗೂ ಗುರುಗಳ ಸೇವೆಗೆ ಸಾಕ್ಷಿಯಾಗಿದೆ ಎಂದರು. ಧರ್ಮರಮಠದ ನಾಗಪ್ಪಜ್ಜನವರು ಧರ್ಮರ, ನಿವೃತ್ತ ಶಿಕ್ಷಕ ಪಿ.ಕೆ. ಕರಡಿ, ಶಿಕ್ಷಕ ಎಸ್.ವಿ. ಹಳ್ಳಿಕೇರಿ ಹಾಗೂ ಮುಖ್ಯ ಶಿಕ್ಷಕ ಎಂ.ಬಿ. ಕೊಪ್ಪದ ಮಾತನಾಡಿದರು.

ಹಳೆಯ ವಿದ್ಯಾರ್ಥಿಗಳಾದ ಅಶೋಕ ಸರ್ವಿ, ರಮೇಶ ಉಳ್ಳಾಗಡ್ಡಿ, ಮಂಜುಳಾ ಕರಡಿ, ನೀಲಮ್ಮ ಲಗುಬಗಿ ಹಾಗೂ ಶಕೀನಾ ಅಂಗಡಿ ತಮ್ಮ ಶಾಲಾ ದಿನಗಳ ಸವಿನೆನಪುಗಳನ್ನು ಹಂಚಿಕೊಂಡರು. ಕಾರ್ಯಕ್ರಮದಲ್ಲಿ ಎಂ.ಎಂ. ಸರ್ವಿ, ಎಂ.ಕೆ. ಸರ್ವಿ, ಕೆ.ಬಿ. ಗಡಾದ, ಬಿ.ಪಿ. ಕಾಗಿ, ಗುರುಮೂರ್ತಿ ಮಂಟಯ್ಯನವರಮಠ, ಎಸ್.ಬಿ. ಹಿರೇಮಠ, ನಂದಾ ಮೆಣಸಗಿ, ಧರ್ಮಾರ್‌ಯತ, ಪೂಜಾ ಅಂಗಡಿ, ಚೇತನ್ ಭೂಸನೂರಮಠ, ವೀರಪ್ಪ ಅರಮನಿ ಸೇರಿದಂತೆ ಶಿಕ್ಷಕರು ಹಾಗೂ ಹಳೆಯ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಶಿಕ್ಷಕ ಗೋಪಾಲ ಗೋಂದಳೆ ಸ್ವಾಗತಿಸಿದರು. ತಿಪ್ಪನಗೌಡ ಪಾಟೀಲ ವಂದಿಸಿದರು. ಎಚ್.ಬಿ. ಕಟ್ಟಿಮನಿ ನಿರೂಪಿಸಿದರು.

# ಸ್ವಾರ್ಥರಹಿತ ಬದುಕಿಗೆ ಬೆಲೆ, ಬಲವಿದೆ

**ವಿಜಯಸಾಕ್ಷಿ ಸುದ್ದಿ, ದಾವಣಗೆರೆ**

ಸ್ವಾರ್ಥವನ್ನು ಗೆದ್ದವನು ಶಾಂತಿಯನ್ನು ಪಡೆದವನು. ಸತ್ಯವನ್ನು ಅರಿತವನೇ ನಿಜವಾದ ಸುಖಿ. ಸ್ವಾರ್ಥರಹಿತ ಬದುಕಿಗೆ ಜೀವನದಲ್ಲಿ ಬೆಲೆ ಹಾಗೂ ಬಲವಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು. ನಗರದ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಮಂಗಲ ಭವನದಲ್ಲಿ ಶನಿವಾರ ನಡೆದ ಇಷ್ಟಲಿಂಗ ಮಹಾಪೂಜಾ ಹಾಗೂ ಜನಜಾಗೃತಿ ಧರ್ಮ ಸಮಾರಂಭದ ಮೂರನೇ ದಿನದ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು. ಸದ್ವರ್ತನೆ, ಸೌಹಾರ್ದತೆ ಹಾಗೂ ಶಾಂತಿ ಸಮೃದ್ಧಿಯ ಸಫಲತೆಗೆ ಸೋಪಾನವಾಗಿವೆ. ಹೊಸತನದೊಂದಿಗೆ ಹಿರಿತನದ ಕಳೆ ಮೇಳೈಸಿದಾಗ ಬದುಕಿಗೆ ಬೆಲೆ ಹಾಗೂ ಬಲ ಬರಲು ಸಾಧ್ಯ. ಅನುಕೂಲ ಮತ್ತು ಪ್ರತಿಕೂಲ ಪರಿಸ್ಥಿತಿಗಳಲ್ಲೂ ಬದುಕುವುದು ಜೀವನದ ಕಲೆ ಎಂದರು.

ಮನಸ್ಸು, ಬುದ್ಧಿ ಹಾಗೂ ಸದ್ವಿಚಾರಗಳು ಬೆಳೆದಾಗ ಜೀವನದಲ್ಲಿ ಶ್ರೇಯಸ್ಸು ದೊರೆಯುತ್ತದೆ. ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಆದರ್ಶಗಳೇ ದಾರಿದೀಪ. ಧಾರ್ಮಿಕ ಹಾಗೂ ಸಾಮಾಜಿಕ ಮೌಲ್ಯಗಳು ಕಣ್ಮರೆಯಾದರೆ ಧರ್ಮ ಮತ್ತು ಸಂಸ್ಕೃತಿ ಉಳಿಯಲು ಸಾಧ್ಯವಿಲ್ಲ ಎಂದು ಹೇಳಿದರು. ಗುರುವಿನ ಬೋಧನೆಯಿಂದ ಮನಸ್ಸು ಅರಳುತ್ತದೆ. ಭಾವನೆಗಳು ವಿಕಾಸಗೊಳ್ಳುತ್ತವೆ. ಬಿರುಗಾಳಿಯ ಸಂದರ್ಭದಲ್ಲಿ ಗುರು ತಂಗಾಳಿಯಂತೆ ಮಾರ್ಗದರ್ಶನ ನೀಡುತ್ತಾನೆ. ವೀರಶೈವ ಧರ್ಮ ಮಾತ್ರವಲ್ಲದೆ ಎಲ್ಲ ಧರ್ಮಗಳಲ್ಲೂ ಗುರುವಿಗೆ ಪ್ರಥಮ ಸ್ಥಾನ ನೀಡಿರುವುದನ್ನು ಕಾಣಬಹುದು. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಶಿವಾದ್ವೈತ ತತ್ವ ಸಿದ್ಧಾಂತದಲ್ಲಿ ಜೀವಾತ್ಮ ಪರಮಾತ್ಮನಾಗುವ ಸಾಧನಾ ಮಾರ್ಗವನ್ನು ಅರ್ಥಪೂರ್ಣವಾಗಿ ಬೋಧಿಸಿದ್ದಾರೆ ಎಂದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡ ದಾವಣಗೆರೆ ವಿಶ್ವವಿದ್ಯಾಲಯದ ಕುಲಪತಿ ಡಾ. ಬಿ.ಇ. ರಂಗಸ್ವಾಮಿ, ಆದರ್ಶ ಬದುಕಿಗೆ ಗುರು ಕಾರುಣ್ಯ ಹಾಗೂ ಧರ್ಮಶ್ರದ್ಧೆ ಅಗತ್ಯ. ಗುರುದೇವನ ಕರುಣೆಗೆ ಸಮಾನವಾದುದು ಮತ್ತೊಂದಿಲ್ಲ. ತಂದೆ ಮೆಚ್ಚಿದರೆ ಮಗನ ಶ್ರೇಯಸ್ಸು, ಗುರು ಮೆಚ್ಚಿದರೆ ಶಿಷ್ಯನ ಉದ್ಧಾರ ಸಾಧ್ಯ. ಗುರುಶಿಷ್ಯರ ಪರಂಪರೆ ಅನಾದಿ ಕಾಲದಿಂದಲೂ ಬಂದಿದೆ ಎಂದರು.

ವೀರಶೈವಲಿಂಗಾಯತ ಮುಖಂಡ ಹೆಚ್.ಎಸ್. ನಾಗರಾಜ್ ಮಾತನಾಡಿ, ಸಮಾಜದ ಶಕ್ತಿ ದೊಡ್ಡದಾಗಿದೆ. ಒಳಪಂಗಡಗಳನ್ನು ಮರೆತು ಒಂದಾಗಿ ಬಾಳಿದರೆ ಆ ಶಕ್ತಿ ಮತ್ತಷ್ಟು ಹೆಚ್ಚಾಗುತ್ತದೆ ಎಂದರು.

ಜಾವೀದಸಾಬ್ ಸಂತೇಬೆನ್ನೂರು ಅವರಿಗೆ ವ್ಯವಹಾರ ಕಲಾ ಕೌಶಲ್ಯ' ಪ್ರಶಸ್ತಿ ನೀಡಿ ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು.

ರಾಣೆಬೆನ್ನೂರು ಹಿರೇಮಠದ ಶಿವಯೋಗಿ ಶಿವಾಚಾರ್ಯರು ಮಾತನಾಡಿ, ಸಮೃದ್ಧ ಹಾಗೂ ಸದೃಢ ನಾಡು ಕಟ್ಟುವುದೇ ಧರ್ಮಪೀಠಗಳ ಗುರಿಯಾಗಿದೆ. ಸಂವೇದನಾಶೀಲ ಜೀವನಕ್ಕೆ ವೀರಶೈವ ಧರ್ಮದ ಕೊಡುಗೆ ಅಪಾರ. ಧರ್ಮದರ್ಶನಗಳ ಅರಿವಿಗೆ ಸಂಸ್ಕೃತಿ ಜ್ಞಾನ ಅಗತ್ಯ ಎಂದರು. ಕಾರ್ಯಕ್ರಮದ ನೇತೃತ್ವ ವಹಿಸಿದ್ದ ಕಣ್ವಕುಪ್ಪಿ ಗವಿಮಠದ ಡಾ. ನಾಲ್ವಡಿ ಶಾಂತಲಿಂಗ ಶಿವಾಚಾರ್ಯರು, ಅಂತರಂಗ ಹಾಗೂ ಬಹಿರಂಗ ಶುದ್ಧಿಗೆ ವೀರಶೈವ ಧರ್ಮ ಆದ್ಯತೆ ನೀಡಿದೆ. ಧರ್ಮದಲ್ಲಿ ಮಾರ್ಗವಿದೆ, ವೇಗವಿಲ್ಲ; ವಿಜ್ಞಾನದಲ್ಲಿ ವೇಗವಿದೆ, ಆದರೆ ಮಾರ್ಗವಿಲ್ಲ. ಇವೆರಡರ ಸಮನ್ವಯದಿಂದ ಮಾನವನ ಬದುಕು ಮತ್ತಷ್ಟು ಎತ್ತರಕ್ಕೆ ಬೆಳೆಯಲು ಸಾಧ್ಯ ಎಂದರು. ಶ್ರೀ ರಂಭಾಪುರಿ ಜಗದ್ಗುರುಗಳ ಜನಜಾಗೃತಿ ಸಮಾರಂಭದಿಂದ ಸಮಾಜದಲ್ಲಿ ಸಾಮರಸ್ಯ ಹಾಗೂ ಸದ್ಭಾವನೆಗಳು ಬೆಳೆದು ಸೌಹಾರ್ದ ಬದುಕಿಗೆ ಸ್ಫೂರ್ತಿ ದೊರೆಯುತ್ತದೆ ಎಂದರು. ಆವರಗೊಳ್ಳ, ಸಂಗೊಳ್ಳಿ, ಚನ್ನಗಿರಿ ಹಾಗೂ ತಾವರೆಕೆರೆ ಶ್ರೀಗಳು ಉಪಸ್ಥಿತರಿದ್ದರು.

ಡಾ. ರೇಣುಕಾರಾಧ್ಯ ಎ.ಎಂ., ಮಹೇಶ್ವರಿ ಬಿ. ಮಂಜುನಾಥ, ಗೀತ ಬಸವರಾಜ್ ಕರಿಶೆಟ್ರು, ಪ್ರತಿಭಾ ಶ್ರೀನಿವಾಸ್, ನಳಿನ ಕೆ.ಎಸ್., ಸುಜಿತಕುಮಾರ್, ಸುಮಾ ನಾಗರಾಜ್ ಅಂದೇಲಿಮಠ, ರತ್ನಮ್ಮ ದೇವರಮನಿ, ಶಿಲ್ಪ, ಚೈತ್ರ, ರಾಜೇಶ್ವರಿ, ದಿವ್ಯ, ಸ್ನೇಹಾ, ಚಂದ್ರಶೇಖರ ಮಠದ, ನಿರ್ಮಲಾ ಪ್ರಭುಸ್ವಾಮಿ ಸೇರಿದಂತೆ ಹಲವಾರು ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಶುಭ ಹಾರೈಸಿದರು. ಶರಭೇಶ್ವರ ಹೋಟೆಲ್ ಮಾಲೀಕ ಬಸವರಾಜಯ್ಯ ದಂಪತಿ ಶ್ರೀ ರಂಭಾಪುರಿ ಜಗದ್ಗುರುಗಳಿಗೆ ಗೌರವ ಮಾಲಾರ್ಪಣೆ ಸಲ್ಲಿಸಿದರು. ಹರಿಹರದ ಕಾಂತರಾಜ ಮತ್ತು ವೀರೇಶ ಸಂಗಡಿಗರಿಂದ ಸಂಗೀತ ಸೌರಭ ನಡೆಯಿತು. ಶಾಂತಿ ಹಾಗೂ ನೆಮ್ಮದಿಯ ಬದುಕಿಗಾಗಿ ಬೆಳಗ್ಗೆ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆ ನೆರವೇರಿಸಿ ಭಕ್ತರಿಗೆ ಶುಭ ಹಾರೈಸಿದರು.

> ಸ್ವಾರ್ಥವನ್ನು ಗೆದ್ದವನು ಶಾಂತಿಯನ್ನು ಪಡೆದವನು. ಸತ್ಯವನ್ನು ತಿಳಿದವನೇ ನಿಜವಾದ ಸುಖಿ. ಸದ್ವರ್ತನೆ, ಸೌಹಾರ್ದತೆ ಹಾಗೂ ಶಾಂತಿ ಸಮೃದ್ಧ ಬದುಕಿಗೆ ಸೋಪಾನವಾಗಿದ್ದು, ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳನ್ನು ಉಳಿಸಿಕೊಂಡಾಗ ಆರೋಗ್ಯಪೂರ್ಣ ಸಮಾಜ ನಿರ್ಮಾಣ ಸಾಧ್ಯ.
> – ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು

ಸಂಕ್ಷಿಪ್ತ ಸುದ್ದಿಗಳು

# ಹೇಮಾವತಿ ನೀರು ಹರಿಸಲು ಆಗ್ರಹಿಸಿ ಪ್ರತಿಭಟನೆ




**ವಿಜಯಸಾಕ್ಷಿ ಸುದ್ದಿ, ತುರುವೇಕೆರೆ**


ತುರುವೇಕೆರೆ ತಾಲೂಕಿಗೆ ಸಮರ್ಪಕವಾಗಿ ಹೇಮಾವತಿ ನೀರು ಹರಿಸುವಂತೆ ಒತ್ತಾಯಿಸಿ ಜೆಡಿಎಸ್ ಶಾಸಕ ಎಂ.ಟಿ. ಕೃಷ್ಣಪ್ಪ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು.

ತುಮಕೂರು ಜಿಲ್ಲೆಯ ತುರುವೇಕೆರೆ ಪಟ್ಟಣದಿಂದ ಹೇಮಾವತಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದ ಪ್ರತಿಭಟನಾಕಾರರು, ತಾಲೂಕಿಗೆ ಸಮರ್ಪಕವಾಗಿ ಹೇಮಾವತಿ ನೀರು ಹರಿಸಬೇಕು ಎಂದು ಆಗ್ರಹಿಸಿದರು.

ರೈತರ ಜಮೀನುಗಳಿಗೆ ಅಗತ್ಯ ಪ್ರಮಾಣದಲ್ಲಿ ನೀರು ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು. ಜತೆಗೆ ರೈತರಿಗೆ ಪ್ರತಿದಿನ ನಾಲ್ಕು ಗಂಟೆ ತ್ರಿಫೇಸ್ ವಿದ್ಯುತ್ ನೀಡಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮಾಜಿ ಶಾಸಕ ಮಸಾಲ ಜಯರಾಮ್, ಎಂ.ಟಿ. ಲಕ್ಷ್ಮೀನಾರಾಯಣ್ ಸೇರಿದಂತೆ ಜೆಡಿಎಸ್ ಮುಖಂಡರು, ಕಾರ್ಯಕರ್ತರು ಹಾಗೂ ರೈತರು ಭಾಗವಹಿಸಿದ್ದರು.

# ಸಿಲಿಕಾನ್ ಸಿಟಿ ಅಲ್ಲ, ಟ್ರಾಫಿಕ್ ಸಿಟಿ: ಭಾರತದಲ್ಲೇ ನಂ.1 ಬೆಂಗಳೂರು



**ವಿಜಯಸಾಕ್ಷಿ ಸುದ್ದಿ, ನವದೆಹಲಿ/ಬೆಂಗಳೂರು**

ಟ್ರಾಫಿಕ್ ಜಾಮ್‌ಗೆ ಕುಖ್ಯಾತಿ ಪಡೆದಿರುವ ಸಿಲಿಕಾನ್ ಸಿಟಿ ಬೆಂಗಳೂರು ಇದೀಗ ದೇಶದಲ್ಲೇ ಅತಿ ಹೆಚ್ಚು ಸಂಚಾರ ದಟ್ಟಣೆ ಹೊಂದಿರುವ ನಗರ ಎಂಬ ಪಟ್ಟಕ್ಕೆ ಸೇರಿದೆ. ಟಾಮ್‌ಟಾಮ್ ಸಂಸ್ಥೆಯ 2025ರ ಟ್ರಾಫಿಕ್ ಇಂಡೆಕ್ಸ್ ವರದಿಯಲ್ಲಿ ಬೆಂಗಳೂರು ಭಾರತದಲ್ಲಿ ಮೊದಲ ಸ್ಥಾನ ಪಡೆದಿದ್ದು, ಕೇವಲ 10 ಕಿಲೋಮೀಟರ್ ಸಂಚಾರಕ್ಕೆ ಸರಾಸರಿ 36 ನಿಮಿಷ 9 ಸೆಕೆಂಡ್ ಬೇಕಾಗುತ್ತಿರುವುದು ಆತಂಕಕಾರಿ ಅಂಶವಾಗಿದೆ. ವಿಶ್ವದ ಪ್ರಮುಖ ನಗರಗಳ ಸಂಚಾರ ಪರಿಸ್ಥಿತಿಯನ್ನು ಅಧ್ಯಯನ ನಡೆಸುವ ನ್ಯಾವಿಗೇಷನ್ ಟೆಕ್ನಾಲಜಿ ಕಂಪನಿ ಟಾಮ್‌ಟಾಮ್ ತನ್ನ ವಾರ್ಷಿಕ ಟ್ರಾಫಿಕ್ ಇಂಡೆಕ್ಸ್‌ನಲ್ಲಿ ಬೆಂಗಳೂರಿನ ವಾಹನ ದಟ್ಟಣೆಯ ಚಿತ್ರಣವನ್ನು ಬಹಿರಂಗಪಡಿಸಿದೆ. ಈಗಾಗಲೇ ಸಂಚಾರ ದಟ್ಟಣೆಯಿಂದ ವಿಶ್ವಮಟ್ಟದಲ್ಲೂ ಕುಖ್ಯಾತಿ ಪಡೆದಿದ್ದ ಬೆಂಗಳೂರು, 2025ರ ವರದಿಯಲ್ಲಿ ಭಾರತದಲ್ಲೇ ಮೊದಲ ಸ್ಥಾನ ಪಡೆದು ಮತ್ತೆ ಸುದ್ದಿಯಾಗಿದೆ.

ನಗರದಲ್ಲಿ ವಾಹನ ಸವಾರರು ಪೀಕ್ ಅವರ್ ಟ್ರಾಫಿಕ್‌ನಲ್ಲಿ ವರ್ಷಕ್ಕೆ ಬರೋಬ್ಬರಿ 168 ಗಂಟೆಗಳನ್ನು ಕಳೆದುಕೊಳ್ಳುತ್ತಿದ್ದಾರೆ. ಅಂದರೆ ಸುಮಾರು 7 ದಿನಗಳ ಕಾಲ ರಸ್ತೆ ಮೇಲೆಯೇ ಸಮಯ ವ್ಯರ್ಥವಾಗುತ್ತಿದೆ ಎಂಬ ಅಂಶ ವರದಿಯಲ್ಲಿ ಬಹಿರಂಗವಾಗಿದೆ. ರಶ್ ಅವರ್ ವೇಳೆ ಬೆಂಗಳೂರಿನ ವಾಹನಗಳ ಸರಾಸರಿ ವೇಗ ಗಂಟೆಗೆ ಕೇವಲ 13.9 ಕಿಲೋಮೀಟರ್‌ಗೆ ಇಳಿಯುತ್ತಿದೆ. 2024ಕ್ಕೆ ಹೋಲಿಸಿದರೆ 2025ರಲ್ಲಿ ಸಂಚಾರ ದಟ್ಟಣೆ ಮತ್ತಷ್ಟು ಹೆಚ್ಚಾಗಿದ್ದು, ಮುಂದಿನ ದಿನಗಳಲ್ಲಿ ಪರಿಸ್ಥಿತಿ ಇನ್ನಷ್ಟು ಗಂಭೀರವಾಗುವ ಆತಂಕವೂ ವ್ಯಕ್ತವಾಗಿದೆ.

ಬೆಂಗಳೂರು ಬಳಿಕ ಕೋಲ್ಕತ್ತಾ ಎರಡನೇ ಸ್ಥಾನದಲ್ಲಿದ್ದರೆ, ಪುಣೆ ಮೂರನೇ ಸ್ಥಾನ ಪಡೆದಿದೆ. ಪುಣೆಯಲ್ಲಿ 10 ಕಿಲೋಮೀಟರ್ ದೂರ ಕ್ರಮಿಸಲು ಸರಾಸರಿ 33 ನಿಮಿಷ 20 ಸೆಕೆಂಡ್ ಬೇಕಾಗುತ್ತಿದೆ. ನಗರದ ವೇಗವಾಗಿ ಹೆಚ್ಚುತ್ತಿರುವ ವಾಹನಗಳ ಸಂಖ್ಯೆ, ರಸ್ತೆ ಮೂಲಸೌಕರ್ಯಗಳ ಮೇಲಿನ ಒತ್ತಡ ಮತ್ತು ಪೀಕ್ ಅವರ್ ದಟ್ಟಣೆ ಬೆಂಗಳೂರಿನ ಟ್ರಾಫಿಕ್ ಸಮಸ್ಯೆಯನ್ನು ದಿನದಿಂದ ದಿನಕ್ಕೆ ಗಂಭೀರಗೊಳಿಸುತ್ತಿದೆ. 2025ರ ಟಾಮ್‌ಟಾಮ್ ಟ್ರಾಫಿಕ್ ಇಂಡೆಕ್ಸ್ ವರದಿ ಇದೀಗ ಬೆಂಗಳೂರಿನ ಸಂಚಾರ ವ್ಯವಸ್ಥೆಗೆ ಮತ್ತೊಮ್ಮೆ ಎಚ್ಚರಿಕೆಯ ಗಂಟೆ ಮೊಳಗಿಸಿದೆ.

### ಕರ್ನಾಟಕಕ್ಕೆ ತಕ್ಷಣ 4.536 ಟಿಎಂಸಿ ನೀರು ಬಿಡಲು ತಮಿಳುನಾಡು ಆಗ್ರಹ

# ಕಾವೇರಿ ನೀರು ವಿವಾದ ಮತ್ತೆ ಸುಪ್ರೀಂ ಅಂಗಳಕ್ಕೆ



**ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಕಾವೇರಿ ನದಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶದಂತೆ ತಕ್ಷಣವೇ ನೀರು ಹರಿಸುವಂತೆ ಕರ್ನಾಟಕಕ್ಕೆ ನಿರ್ದೇಶನ ನೀಡಬೇಕು ಎಂದು ತಮಿಳುನಾಡು ಸರ್ಕಾರ ಸಲ್ಲಿಸಿರುವ ಅರ್ಜಿಯನ್ನು ಸುಪ್ರೀಂ ಕೋರ್ಟ್ ಗುರುವಾರ ವಿಚಾರಣೆಗೆ ಕೈಗೆತ್ತಿಕೊಳ್ಳಲು ಸಮ್ಮತಿಸಿದೆ. ತಮಿಳುನಾಡು ಸರ್ಕಾರದ ಪರವಾಗಿ ಹಿರಿಯ ವಕೀಲ ಸಿ.ಎಸ್. ವೈದ್ಯನಾಥನ್ ಅವರು ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರ ನೇತೃತ್ವದ ಪೀಠದ ಮುಂದೆ ವಿಷಯ ಪ್ರಸ್ತಾಪಿಸಿ ತುರ್ತು ವಿಚಾರಣೆಗೆ ಮನವಿ ಮಾಡಿದರು. ಮನವಿಯನ್ನು ಪರಿಗಣಿಸಿದ ನ್ಯಾಯಪೀಠವು ಗುರುವಾರ ಅರ್ಜಿಯ ವಿಚಾರಣೆ ನಡೆಸುವುದಾಗಿ ತಿಳಿಸಿದೆ.

ಜುಲೈ 30ರಂದು ನಡೆದ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಕರ್ನಾಟಕದ ಕಬಿನಿ ಹಾಗೂ ಕೃಷ್ಣರಾಜ ಸಾಗರ ಜಲಾಶಯಗಳಿಂದ ದಿನಕ್ಕೆ 3,500 ಕ್ಯೂಸೆಕ್‌ನಂತೆ 15 ದಿನಗಳ ಕಾಲ ನೀರು ಹರಿಸುವಂತೆ ಆದೇಶಿಸಲಾಗಿತ್ತು. ಈ ಆದೇಶವನ್ನು ಜಾರಿಗೊಳಿಸುವಂತೆ ತಮಿಳುನಾಡು ಸರ್ಕಾರ ಆಗಸ್ಟ್ 3ರಂದು ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ದಿನಕ್ಕೆ 3,500 ಕ್ಯೂಸೆಕ್‌ನಂತೆ 15 ದಿನಗಳ ಅವಧಿಯಲ್ಲಿ ಒಟ್ಟು 4.536 ಟಿಎಂಸಿ ನೀರನ್ನು ಆಗಸ್ಟ್ 12ರೊಳಗೆ ಬಿಡುಗಡೆ ಮಾಡುವಂತೆ ಕರ್ನಾಟಕಕ್ಕೆ ನಿರ್ದೇಶನ ನೀಡಬೇಕು ಎಂದು ತಮಿಳುನಾಡು ತನ್ನ ಅರ್ಜಿಯಲ್ಲಿ ಕೋರಿದೆ. ಕಾವೇರಿ ನೀರು ಬಿಡುಗಡೆ ವಿಚಾರದಲ್ಲಿ ತಮಿಳುನಾಡಿನ ವಿರೋಧ ಪಕ್ಷ ದ್ರಾವಿಡ ಮುನ್ನೇತ್ರ ಕಳಗಂ ಕೂಡ ಪ್ರತ್ಯೇಕ ಅರ್ಜಿ ಸಲ್ಲಿಸಿದೆ. ಹೀಗಾಗಿ ಕಾವೇರಿ ನೀರು ಹಂಚಿಕೆ ವಿವಾದ ಮತ್ತೊಮ್ಮೆ ಸುಪ್ರೀಂ ಕೋರ್ಟ್ ಅಂಗಳಕ್ಕೆ ತಲುಪಿದ್ದು, ಗುರುವಾರದ ವಿಚಾರಣೆ ಮಹತ್ವ ಪಡೆದುಕೊಂಡಿದೆ.

### ಭೂಮಾನಂದ ಹಬ್ಬಿನಹಾಳ ಕುಟುಂಬಕ್ಕೆ ₹50 ಲಕ್ಷ ಪರಿಹಾರ, 10 ಎಕರೆ ಜಮೀನು ನೀಡಿ

# ಮಾದಿಗ ಮುಖಂಡನ ಹತ್ಯೆ: ಆರೋಪಿಗಳಿಗೆ ಗಲ್ಲು ಶಿಕ್ಷೆ ವಿಧಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಯಚೂರು ಜಿಲ್ಲೆಯ ಸಂಕೇಶ್ವರಹಾಳದಲ್ಲಿ ಮಾದಿಗ ಸಮಾಜದ ಮುಖಂಡ ಭೂಮಾನಂದ ಹಬ್ಬಿನಹಾಳ ಅವರನ್ನು ಭೀಕರವಾಗಿ ಹತ್ಯೆ ಮಾಡಿರುವ ಪ್ರಕರಣದ ಆರೋಪಿಗಳಿಗೆ ಗಲ್ಲು ಶಿಕ್ಷೆ ವಿಧಿಸಬೇಕು. ಇಂತಹ ಘಟನೆಗಳು ಮರುಕಳಿಸದಂತೆ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಮಾದಿಗ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಉಡಚಪ್ಪ ಹಳ್ಳಿಕೇರಿ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭೂಮಾನಂದ ಹಬ್ಬಿನಹಾಳ ಅವರ ಹತ್ಯೆ ಖಂಡನೀಯ. ಪ್ರಕರಣವನ್ನು ತ್ವರಿತ ನ್ಯಾಯಾಲಯದಲ್ಲಿ ವಿಚಾರಣೆ ನಡೆಸಿ ಶೀಘ್ರ ತೀರ್ಪು ನೀಡುವ ಮೂಲಕ ಮೃತರ ಕುಟುಂಬಕ್ಕೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಮೃತರ ಕುಟುಂಬಕ್ಕೆ ಸರ್ಕಾರದಿಂದ ₹50 ಲಕ್ಷ ಪರಿಹಾರ, 10 ಎಕರೆ ಜಮೀನು ಮಂಜೂರು ಮಾಡಬೇಕು. ಕುಟುಂಬದ ಒಬ್ಬ ಸದಸ್ಯರಿಗೆ ಸರ್ಕಾರಿ ಉದ್ಯೋಗ ನೀಡಬೇಕು. ಪ್ರಕರಣದಲ್ಲಿ ಕರ್ತವ್ಯಲೋಪ ಎಸಗಿರುವ ರಾಯಚೂರು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯನ್ನು ತಕ್ಷಣ ಅಮಾನತುಗೊಳಿಸಬೇಕು ಎಂದು ಆಗ್ರಹಿಸಿದರು.

ರೋಣ ತಾಲೂಕಿನಲ್ಲಿ ಬುದ್ಧಿಮಾಂದ್ಯ ಯುವತಿ ಮೇಲೆ ಅತ್ಯಾಚಾರ ಎಸಗಿದ ಆರೋಪಿಗಳನ್ನು ಗಡಿಪಾರು ಮಾಡಬೇಕು. ಧಾರವಾಡ ಜಿಲ್ಲೆಯ ಅಳ್ನಾವರ ತಾಲೂಕಿನ ಕುಂಬಾರಕೊಪ್ಪದಲ್ಲಿ ಮಾದಿಗ ಸಮಾಜದ ವ್ಯಕ್ತಿಯ ಹತ್ಯೆ ಪ್ರಕರಣದ ಆರೋಪಿಗಳಿಗೆ ಜೀವಾವಧಿ ಶಿಕ್ಷೆ ವಿಧಿಸಬೇಕು. ದಾವಣಗೆರೆಯಲ್ಲಿ ದೇವಸ್ಥಾನ ಪ್ರವೇಶಿಸಿದ್ದಕ್ಕೆ ದಲಿತ ಯುವಕನ ಮೇಲೆ ಹಲ್ಲೆ ನಡೆಸಿದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು

ಸುದ್ದಿಗೋಷ್ಠಿಯಲ್ಲಿ ಸವಡಿಯ ಮರುಳಸಿದ್ದ ಸ್ವಾಮೀಜಿ, ಮಾದಿಗ ಮಹಾಸಭಾದ ಗೌರವಾಧ್ಯಕ್ಷ ವಿಜಯ ಕಲ್ಮನಿ, ಮೈಲಾರಪ್ಪ, ಚಂದ್ರು, ಸುನಿಲ್ ಬಂಡೆನ್ನವರ, ರಾಘವೇಂದ್ರ ಹಾಗೂ ವಿನಾಯಕ ಕಟ್ಟಿಮನಿ ಉಪಸ್ಥಿತರಿದ್ದರು.




> ದೇಶಕ್ಕೆ ಸ್ವಾತಂತ್ರ್ಯ ದೊರೆತು ಹಲವು ವರ್ಷಗಳು ಕಳೆದರೂ ದಲಿತರ ಮೇಲಿನ ದೌರ್ಜನ್ಯಗಳು ಮುಂದುವರಿದಿವೆ. ಇಂತಹ ಘಟನೆಗಳಿಗೆ ಕಡಿವಾಣ ಹಾಕಲು ಸರ್ಕಾರ ಹಾಗೂ ಆಡಳಿತ ವ್ಯವಸ್ಥೆ ಶಾಂತಿಸಭೆ, ಮುಂಜಾಗ್ರತಾ ಕ್ರಮ ಸೇರಿದಂತೆ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು.
> – **ಉಡಚಪ್ಪ ಹಳ್ಳಿಕೇರಿ**, ಅಧ್ಯಕ್ಷರು, ಮಾದಿಗ ಮಹಾಸಭಾ ಜಿಲ್ಲಾ ಘಟಕ

### ಗುರುವಂದನೆಗೆ ಭಾವುಕರಾದ ನಿವೃತ್ತ ಉಪನ್ಯಾಸಕರು; ಪಾದಪೂಜೆ ಮಾಡಿ ಗುರುಭಕ್ತಿ ಮೆರೆದ ಹಳೆಯ ವಿದ್ಯಾರ್ಥಿಗಳು

# 30 ವರ್ಷಗಳ ಬಳಿಕ ಒಂದಾದ ಗುರುಶಿಷ್ಯರು




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಜಿವಿಪಿಪಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ 199699ನೇ ಸಾಲಿನ ಹಳೆಯ ವಿದ್ಯಾರ್ಥಿಗಳ ಸ್ನೇಹಮಿಲನ ಹಾಗೂ ಗುರುವಂದನಾ ಕಾರ್ಯಕ್ರಮ ಗುರುಶಿಷ್ಯರ ಭಾವನಾತ್ಮಕ ಸಮ್ಮಿಲನಕ್ಕೆ ಸಾಕ್ಷಿಯಾಯಿತು.

ಸುಮಾರು ಮೂರು ದಶಕಗಳ ಬಳಿಕ ಒಂದೆಡೆ ಸೇರಿದ ಹಳೆಯ ವಿದ್ಯಾರ್ಥಿಗಳು ತಮ್ಮ ನೆಚ್ಚಿನ ಗುರುಗಳನ್ನು ಆತ್ಮೀಯವಾಗಿ ಬರಮಾಡಿಕೊಂಡು ಪಾದಪೂಜೆ ನೆರವೇರಿಸಿ, ಸನ್ಮಾನಿಸಿ ಗೌರವಿಸಿದರು. ಹಳೆಯ ನೆನಪುಗಳನ್ನು ಮೆಲುಕು ಹಾಕಿದ ಗುರುಶಿಷ್ಯರು ಪರಸ್ಪರ ಭಾವುಕರಾದರು.

ಕಾರ್ಯಕ್ರಮದಲ್ಲಿ ಮಾತನಾಡಿದ ನಿವೃತ್ತ ಪ್ರಾಚಾರ್ಯ ತು.ಕ. ಶಂಕ್ರಯ್ಯ, ಅಂದಿನ ವಿದ್ಯಾರ್ಥಿಗಳ ಕಲಿಕೆಯ ಆಸಕ್ತಿ ಹಾಗೂ ಕ್ರಿಯಾಶೀಲತೆಯಿಂದ ಉಪನ್ಯಾಸಕರು ಕೂಡ ಹೆಚ್ಚು ಅಧ್ಯಯನಶೀಲರಾಗುತ್ತಿದ್ದೆವು.

ಕಾಲೇಜಿನಲ್ಲಿ ಇಂತಹ ಕಾರ್ಯಕ್ರಮ ನಡೆಯುತ್ತಿರುವುದು ಇದೇ ಮೊದಲು ಎಂಬುದು ಸಂತಸದ ಸಂಗತಿ ಎಂದರು.

ವಾಣಿಜ್ಯ ವಿಭಾಗದ ನಿವೃತ್ತ ಪ್ರಾಧ್ಯಾಪಕ ಡಾ. ಕೆ. ಪನ್ನಂಗದರ ಮಾತನಾಡಿ, ಹಗರಿಬೊಮ್ಮನಹಳ್ಳಿಯಲ್ಲಿ ಅಂದಿನ ಕಾಲದಲ್ಲಿ ಪ್ರಥಮ ದರ್ಜೆ ಕಾಲೇಜು ನಿರ್ಮಾಣ ಹಾಗೂ ಬೆಳವಣಿಗೆಯಲ್ಲಿ ನಿವೃತ್ತ ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ಸಿಬ್ಬಂದಿಯ ಪಾತ್ರ ಮಹತ್ವದ್ದಾಗಿದೆ ಎಂದು ಸ್ಮರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಸ್ತುತ ಪ್ರಾಂಶುಪಾಲ ಮಂಜುನಾಥ ಉಲವತ್ತಿ ಶೆಟ್ಟರ್ ವಹಿಸಿದ್ದರು. ನಿವೃತ್ತ ಪ್ರಾಚಾರ್ಯರಾದ ಎನ್.ವಿ. ಹನುಮಂತಯ್ಯ, ಹುರಕಡ್ಲಿ ಬಸಪ್ಪ, ಬಿ. ಮಾರುತೇಶ್, ಜಿ. ಮಲ್ಲಿಕಾರ್ಜುನ, ಅಪ್ಪೇನಹಳ್ಳಿ ಹೇಮರೆಡ್ಡಿ, ನಿವೃತ್ತ ಗ್ರಂಥಪಾಲಕ ಕೆ. ರಾಮಲಿಂಗಪ್ಪ, ಕಾಲೇಜಿನ ಪ್ರಸ್ತುತ ಸೂಪರಿಂಟೆಂಡೆಂಟ್ ಸುರೇಶ್, ದಿವಂಗತ ಕೃಷ್ಣ ನಾಯಕ್ ಅವರ ಧರ್ಮಪತ್ನಿ ಪುಷ್ಪಾ ಕೃಷ್ಣ ನಾಯಕ್ ಸೇರಿದಂತೆ ಹಲವರು ವೇದಿಕೆಯಲ್ಲಿದ್ದರು.

ವಾಣಿಶ್ರೀ ಹಾಗೂ ನಾಗಲಕ್ಷ್ಮಿ ಸ್ವಾಗತಿಸಿದರು. ಎಂ.ಪಿ.ಎಂ. ಮಂಜುನಾಥ್ ಪ್ರಾಸ್ತಾವಿಕ ಮಾತನಾಡಿದರು. ಕೆ.ಎಂ. ಶಿವಕುಮಾರ್ ವಂದಿಸಿದರು. ಉಪನ್ಯಾಸಕ ಬೆಟ್ಟಪ್ಪ ಕಾರ್ಯಕ್ರಮ ನಿರೂಪಿಸಿದರು. ವಿದ್ಯಾರ್ಥಿ ಮುಖಂಡ ಎನ್.ಎಂ. ಗೌಸ್ ಕಾರ್ಯಕ್ರಮದ ಆಯೋಜನೆ ಹಾಗೂ ಅಂದಿನ ವಿದ್ಯಾರ್ಥಿ ಜೀವನದ ನೆನಪುಗಳನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ನೀಲಪ್ಪ, ಗುಡ್ಡಪ್ಪ, ರೇವಣಸಿದ್ದನಗೌಡ, ಡಿ. ಇಬ್ರಾಹಿಂ, ಡಿ.ಕೆ. ಕೊಟ್ರೇಶ್, ಅಕ್ಕಿ ಮಲ್ಲಿಕಾರ್ಜುನ, ಬಿ. ಶ್ರೀನಿವಾಸ್, ಸಿ.ಎಂ. ಶ್ರೀನಿವಾಸ್, ಮಮತಾ, ವಾಸಂತಿ, ಎಸ್. ಬಾನು, ಎ. ಯಶೋಧ, ಭದ್ರವಾಡಿ ನಾಗವೇಣಿ, ಎಸ್.ಎಂ. ಶೈಲಜಾ ಸೇರಿದಂತೆ ಹಲವು ಹಳೆಯ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಬದುಕಿನ ದೊಡ್ಡ ಸಿಲಬಸ್ ಕಲಿಯಿರಿ, ಯಶಸ್ಸಿನ ಪಾಸ್ ಪಡೆಯಿರಿ: ಪ್ರೊ. ಡಿ.ವಿ. ಪರಮಶಿವಮೂರ್ತಿ

# ಹಣ, ಪ್ರಭಾವದ ಹಿಂದೆ ಹೋಗದೆ ಸಾಧಕರನ್ನು ಆದರ್ಶವಾಗಿಸಿಕೊಳ್ಳಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಶಿಕ್ಷಣ ಕೇವಲ ಪಠ್ಯಕ್ರಮ, ಪರೀಕ್ಷೆ ಹಾಗೂ ಪ್ರಮಾಣಪತ್ರಕ್ಕೆ ಸೀಮಿತವಾಗಬಾರದು. ಪಠ್ಯದ ಜತೆಗೆ ಬದುಕಿನ ದೊಡ್ಡ ಸಿಲಬಸ್‌ನ್ನೂ ಕಲಿತು ಜೀವನದಲ್ಲೂ ಯಶಸ್ವಿಯಾಗಿ ಪಾಸ್‌ಟಿ ಆಗಬೇಕು ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಡಿ.ವಿ. ಪರಮಶಿವಮೂರ್ತಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ನರೇಗಲ್ಲದ ಶ್ರೀ ಅನ್ನದಾನೇಶ್ವರ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ನಡೆದ ಅಂತರಂಗ2026ಟಿ ಹಾಗೂ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿ ಹಂತ ವಿದ್ಯಾರ್ಥಿ ಜೀವನದ ಸೂಕ್ಷ್ಮ ಘಟ್ಟವಾಗಿದ್ದು, ವಿದ್ಯಾರ್ಥಿಗಳು ನಕಾರಾತ್ಮಕ ವಿಚಾರಗಳಿಂದ ದೂರವಿದ್ದು, ಬಸವಾದಿ ಶರಣರು, ಕುವೆಂಪು, ಬೇಂದ್ರೆ, ಸ್ವಾಮಿ ವಿವೇಕಾನಂದರಂತಹ ಮಹನೀಯರನ್ನು ಆದರ್ಶವಾಗಿಸಿಕೊಳ್ಳಬೇಕು ಎಂದರು. ಹಣ, ಪ್ರಭಾವ ಹಾಗೂ ಕ್ಷಣಿಕ ಜನಪ್ರಿಯತೆಯ ಹಿಂದೆ ಹೋಗದೆ ಸಮಾಜಕ್ಕೆ ಕೊಡುಗೆ ನೀಡಿದ ಸಾಧಕರು, ಸಾಹಿತಿಗಳು, ಕಲಾವಿದರು, ವಿಜ್ಞಾನಿಗಳು ಹಾಗೂ ಸಮಾಜ ಸೇವಕರನ್ನು ಮಾದರಿಯಾಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

> ಶಿಕ್ಷಣವೆಂದರೆ ಕೇವಲ ಪಠ್ಯಕ್ರಮ, ಪರೀಕ್ಷೆ ಹಾಗೂ ಪ್ರಮಾಣಪತ್ರವಲ್ಲ. ಪಠ್ಯದ ಜತೆಗೆ ಬದುಕಿನ ದೊಡ್ಡ ಸಿಲಬಸ್‌ನ್ನೂ ಕಲಿತು, ಜೀವನದಲ್ಲೂ ಯಶಸ್ವಿಯಾಗಿ ಪಾಸ್‌ಟಿ ಆಗಬೇಕು.
> – **ಪ್ರೊ. ಡಿ.ವಿ. ಪರಮಶಿವಮೂರ್ತಿ, ಕುಲಪತಿ, ಹಂಪಿ ಕನ್ನಡ ವಿಶ್ವವಿದ್ಯಾಲಯ**

ಮಹಿಳೆಯರಿಗೆ ಇಂದು ಅನೇಕ ಹೊಸ ಕ್ಷೇತ್ರಗಳು ತೆರೆದುಕೊಂಡಿದ್ದು, ವಿದ್ಯಾರ್ಥಿನಿಯರು ಹೊಸ ಕ್ಷೇತ್ರಗಳಲ್ಲಿ ಸಾಧನೆ ಮಾಡಬೇಕು. ನರೇಗಲ್ಲದ ಐತಿಹಾಸಿಕ ಹಿನ್ನೆಲೆಯ ಅರಿವು ಬೆಳೆಸಿಕೊಳ್ಳಬೇಕು. ಇತಿಹಾಸ ತಿಳಿಯದೆ ಭವಿಷ್ಯ ನಿರ್ಮಿಸಲು ಸಾಧ್ಯವಿಲ್ಲ ಎಂದರು.

ಹಾಲಕೆರೆಯ ಅನ್ನದಾನೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಮುಪ್ಪಿನ ಬಸವಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ಅಂತರಂಗಟಿ ಮನುಷ್ಯ ತನ್ನೊಳಗಿನ ಜಗತ್ತನ್ನು ಅರಿಯುವ ಪ್ರಯತ್ನವಾಗಿದೆ. ಶಿಕ್ಷಣವು ಹಣ ಗಳಿಸುವುದನ್ನು ಮಾತ್ರವಲ್ಲ, ಬದುಕುವುದನ್ನೂ ಕಲಿಸಬೇಕು. ಸಂತೃಪ್ತಿ ಹಾಗೂ ಸಮಾಧಾನದಿಂದ ಬದುಕುವುದೇ ನಿಜವಾದ ಯಶಸ್ಸು ಎಂದರು.

ನೀರಿನ ಬಾಟಲಿಯ ಉದಾಹರಣೆ ನೀಡಿದ ಸ್ವಾಮೀಜಿ, ಬಾಟಲಿ ಒಂದೇ ಆಗಿದ್ದರೂ ಅದು ಇರುವ ಸ್ಥಳಕ್ಕೆ ಅನುಗುಣವಾಗಿ ಅದರ ಕಿಮ್ಮತ್ತು ಬದಲಾಗುತ್ತದೆ. ಅದೇ ರೀತಿ ವಿದ್ಯಾರ್ಥಿಗಳ ಕಿಮ್ಮತ್ತನ್ನೂ ಅವರು ಆಯ್ಕೆ ಮಾಡಿಕೊಳ್ಳುವ ವಾತಾವರಣ ಹಾಗೂ ದಾರಿಯೇ ನಿರ್ಧರಿಸುತ್ತದೆ ಎಂದರು.

ಕಾಲೇಜು ಆಡಳಿತ ಮಂಡಳಿ ಚೇರಮನ್ ಎಂ.ಜಿ. ಸೋಮನಕಟ್ಟಿ ಅಧ್ಯಕ್ಷತೆ ವಹಿಸಿದ್ದರು. ರವೀಂದ್ರನಾಥ ದೊಡ್ಡಮೇಟಿ, ಡಾ. ಜಿ.ಕೆ. ಕಾಳೆ, ಬಸವರಾಜ ಕಳಕಣ್ಣವರ, ಎಂ.ಪಿ. ಪಾಟೀಲ, ಜಿ.ಎಸ್. ಶಿರ್ಶಿ, ವೀರಣ್ಣ ಹಳ್ಳಿ, ಎಸ್.ಜಿ. ಕೇಶಣ್ಣವರ, ಬಿ.ಜಿ. ಸಿರಸಿ, ದೀಪಕ್ ನಾಗರೇಶಿ, ಡಾ. ಕಲ್ಲಯ್ಯ ಹಿರೇಮಠ ಉಪಸ್ಥಿತರಿದ್ದರು.

ಪ್ರಾಚಾರ್ಯ ವೈ.ಸಿ. ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಾಧಕ ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರನ್ನು ಸನ್ಮಾನಿಸಲಾಯಿತು. ಎ.ಎಂ. ನದಾಫ್ ಸ್ವಾಗತಿಸಿದರು. ವಿದ್ಯಾರ್ಥಿನಿಯರಾದ ಕೀರ್ತಿ, ಸೌಂದರ್ಯ ಹಾಗೂ ರುಷವಿ ನಿರೂಪಿಸಿದರು. ರಕ್ಷಿತಾ ಗಿಡ್ಡಿಂದಿ ವಂದಿಸಿದರು.

# ಗೋವಾದಿಂದ ಬೆಂಗಳೂರಿಗೆ ಬರುತ್ತಿದ್ದ ಬಸ್ ಪಲ್ಟಿ: ಓರ್ವ ಪ್ರಯಾಣಿಕ ಸಾವು

**ವಿಜಯಸಾಕ್ಷಿ ಸುದ್ದಿ, ಹಾವೇರಿ**

ಗೋವಾದಿಂದ ಬೆಂಗಳೂರಿಗೆ ಬರುತ್ತಿದ್ದ ಖಾಸಗಿ ಬಸ್ ಹಾವೇರಿ ನಗರದ ಹೊರವಲಯದ ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಪಲ್ಟಿಯಾಗಿ ಭೀಕರ ಅಪಘಾತ ಸಂಭವಿಸಿದೆ. ಘಟನೆಯಲ್ಲಿ 18 ವರ್ಷದ ಬಾವರಸಿಂಗ್ ರಜಪೂತ್ ಸ್ಥಳದಲ್ಲೇ ಮೃತಪಟ್ಟಿದ್ದು, 20ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡಿದ್ದಾರೆ.

ಖಾಸಗಿ ಬಸ್ ವೇಗವಾಗಿ ಸಾಗುತ್ತಿದ್ದ ವೇಳೆ ಚಾಲಕನ ನಿಯಂತ್ರಣ ತಪ್ಪಿ ರಸ್ತೆಯಲ್ಲೇ ಪಲ್ಟಿಯಾಗಿದೆ ಎಂದು ತಿಳಿದುಬಂದಿದೆ. ಚಾಲಕನಿಗೆ ನಿದ್ರೆಯ ಮಂಪರು ಬಂದಿದ್ದೇ ಅಪಘಾತಕ್ಕೆ ಕಾರಣವಾಗಿರಬಹುದು ಎಂಬ ಶಂಕೆ ವ್ಯಕ್ತವಾಗಿದ್ದು, ಈ ಬಗ್ಗೆ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಅಪಘಾತ ಸಂಭವಿಸುತ್ತಿದ್ದಂತೆ ಸ್ಥಳೀಯರು ಹಾಗೂ ಪೊಲೀಸರು ರಕ್ಷಣಾ ಕಾರ್ಯಾಚರಣೆಗೆ ಧಾವಿಸಿದ್ದಾರೆ. ಗಾಯಗೊಂಡ ಪ್ರಯಾಣಿಕರನ್ನು ತಕ್ಷಣ ಹಾವೇರಿ ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಅಪಘಾತದ ತೀವ್ರತೆಯಿಂದ ಬಸ್‌ನಲ್ಲಿದ್ದ ಪ್ರಯಾಣಿಕರು ಭಯಭೀತರಾಗಿದ್ದರು ಎಂದು ತಿಳಿದುಬಂದಿದೆ. ಮಾಹಿತಿ ತಿಳಿದ ಹಾವೇರಿ ಸಂಚಾರಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಬಳಿಕ ಅಗ್ನಿಶಾಮಕ ದಳದ ಸಿಬ್ಬಂದಿ ಕಾರ್ಯಾಚರಣೆ ನಡೆಸಿ ಪಲ್ಟಿಯಾಗಿದ್ದ ಬಸ್‌ನ್ನು ರಸ್ತೆಯಿಂದ ತೆರವುಗೊಳಿಸಿದ್ದಾರೆ.

### ಅಪೂರ್ಣ ಗಣತಿಯಿಂದ ಹಲವು ಕುಟುಂಬಗಳು ಸೌಲಭ್ಯಗಳಿಂದ ವಂಚಿತ: ಕೆ. ಅಂಜಿನಮ್ಮ

# ದೇವದಾಸಿ ಮಹಿಳೆಯರ ಗಣತಿ ಪೂರ್ಣಗೊಳಿಸಿ




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಮಾಜಿ ದೇವದಾಸಿ ಮಹಿಳೆಯರು ಹಾಗೂ ಅವರ ಒಂದು, ಎರಡು ಮತ್ತು ಮೂರು ತಲೆಮಾರುಗಳ ಕುಟುಂಬ ಸದಸ್ಯರ ಗಣತಿ ಕಾರ್ಯವನ್ನು ಸರ್ಕಾರ ಸಮಗ್ರವಾಗಿ ಪೂರ್ಣಗೊಳಿಸಿ, ಅರ್ಹ ಎಲ್ಲ ಕುಟುಂಬಗಳನ್ನು ಅಧಿಕೃತವಾಗಿ ಗುರುತಿಸಬೇಕು ಎಂದು ತಾಲೂಕು ದೇವದಾಸಿ ಮಹಿಳೆಯರ ವಿಮೋಚನಾ ಸಂಘದ ಅಧ್ಯಕ್ಷೆ ಕೆ. ಅಂಜಿನಮ್ಮ ಒತ್ತಾಯಿಸಿದರು.

ಪಟ್ಟಣದ ಬಸವೇಶ್ವರ ವೃತ್ತದಲ್ಲಿ ದೇವದಾಸಿ ಮಹಿಳೆಯರ ಸಮಸ್ಯೆಗಳ ಕುರಿತು ಮಾತನಾಡಿದ ಅವರು, ಸರ್ಕಾರದ ವಿವಿಧ ಇಲಾಖೆಗಳ ಮೂಲಕ ಇತ್ತೀಚೆಗೆ ಕೈಗೊಂಡಿರುವ ಮಾಜಿ ದೇವದಾಸಿ ಮಹಿಳೆಯರು ಹಾಗೂ ಅವರ ಮೂರು ತಲೆಮಾರುಗಳ ಕುಟುಂಬ ಸದಸ್ಯರ ಗಣತಿ ಕಾರ್ಯ ಇನ್ನೂ ಅಪೂರ್ಣವಾಗಿದ್ದು, ಸಮಗ್ರವಾಗಿ ನಡೆದಿಲ್ಲ ಎಂದು ಆರೋಪಿಸಿದರು.

2007ರಲ್ಲಿ ನಡೆದ ಗಣತಿ ಅಸಮರ್ಪಕವಾಗಿದ್ದು, ಆಗ ಸುಮಾರು 46,800 ಮಹಿಳೆಯರನ್ನು ಗುರುತಿಸಲಾಗಿತ್ತು. ಆದರೆ ಅಂದಾಜು 20 ಸಾವಿರಕ್ಕೂ ಅಧಿಕ ಮಹಿಳೆಯರು ಗಣತಿಯಿಂದ ಹೊರಗುಳಿದಿದ್ದರು. 1982ರಲ್ಲಿ ಅಥವಾ ನಂತರ ದೇವದಾಸಿ ಮಹಿಳೆಯರಾಗಿದ್ದವರನ್ನೂ ಆ ಗಣತಿಯಲ್ಲಿ ಪರಿಗಣಿಸಿರಲಿಲ್ಲ ಎಂದು ಅವರು ಹೇಳಿದರು.

ಮಾಜಿ ದೇವದಾಸಿ ಮಹಿಳೆಯರಿಗೆ ಸಮರ್ಪಕ ವಸತಿ ಸೌಲಭ್ಯ ಕಲ್ಪಿಸಬೇಕು. ಪಿಂಚಣಿ ಮೊತ್ತವನ್ನು ತಿಂಗಳಿಗೆ ₹6,000ಕ್ಕೆ ಹೆಚ್ಚಿಸಬೇಕು. ಮಾಜಿ ದೇವದಾಸಿಯರ ಮಕ್ಕಳಿಗೆ ಶಿಕ್ಷಣ, ಉದ್ಯೋಗ ಹಾಗೂ ಸಾಮಾಜಿಕ ಭದ್ರತೆ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಸರ್ಕಾರ ಒದಗಿಸಬೇಕು ಎಂದು ಅವರು ಆಗ್ರಹಿಸಿದರು.

ಹಗರಿಬೊಮ್ಮನಹಳ್ಳಿ ತಾಲೂಕೊಂದರಲ್ಲೇ ಸುಮಾರು 1,950 ಮಾಜಿ ದೇವದಾಸಿ ಮಹಿಳೆಯರು ಇದ್ದು, ಅವರ ಯೋಗಕ್ಷೇಮ ಹಾಗೂ ಕುಂದುಕೊರತೆಗಳನ್ನು ಸರ್ಕಾರ ತಕ್ಷಣ ಪರಿಹರಿಸಬೇಕು ಎಂದು ಒತ್ತಾಯಿಸಿದರು.

ನಂತರ ತಾಲೂಕು ಉಪ ತಹಶೀಲ್ದಾರ್ ಕೆ. ಶಿವಕುಮಾರ್ ಗೌಡ ಅವರ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ದೇವದಾಸಿ ವಿಮೋಚನಾ ಸಂಘದ ಕಾರ್ಯದರ್ಶಿ ಪಿ. ಚಾಂದ್, ತಾಲೂಕು ಸಮಿತಿ ಮುಖಂಡರಾದ ಸತ್ಯಮ್ಮ, ಕೆ. ಹನುಮಂತಮ್ಮ, ತಿಮ್ಮಕ್ಕ, ನೀಲಮ್ಮ, ದುರ್ಗಮ್ಮ, ಪದ್ಮಮ್ಮ, ಶಿವಗಂಗಮ್ಮ, ದೊಡ್ಡಬಸಮ್ಮ, ಎಂ. ಗಂಗಮ್ಮ, ಜಿ. ಪಾರ್ವತಮ್ಮ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಸರ್ಕಾರ ನಡೆಸುತ್ತಿರುವ ಗಣತಿ ಕಾರ್ಯವನ್ನು ಯಾವುದೇ ಲೋಪವಿಲ್ಲದೆ ಸಮಗ್ರವಾಗಿ ಪೂರ್ಣಗೊಳಿಸಬೇಕು. ಗಣತಿಯಿಂದ ಹೊರಗುಳಿದಿರುವ ಮಾಜಿ ದೇವದಾಸಿ ಮಹಿಳೆಯರು ಹಾಗೂ ಅವರ ಕುಟುಂಬ ಸದಸ್ಯರನ್ನು ಗುರುತಿಸಿ ಸರ್ಕಾರದ ಸೌಲಭ್ಯಗಳನ್ನು ಒದಗಿಸಬೇಕು.
> – **ಕೆ. ಅಂಜಿನಮ್ಮ**, ಅಧ್ಯಕ್ಷೆ, ತಾಲೂಕು ದೇವದಾಸಿ ಮಹಿಳೆಯರ ವಿಮೋಚನಾ ಸಂಘ

ಕರ್ನಾಟಕ ಸರಕಾರ

**ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯ-582101**

ಜಿಲ್ಲಾ : ಗದಗ ರಾಜ್ಯ : ಕರ್ನಾಟಕ

ದೂ: 08372-259932 ಇ-ಮೇಲ್: ka.gadag.betageri.cmc@gmail.com

ನಂ.ಗಬೆನಸ/ತಾಂ.ವಿ/ವಹಿ/ಟೆಂಡರ್/2026-27 ದಿನಾಂಕ: 10-08-2026

**ಟೆಂಡರ್ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕತೆ ಅಧಿನಿಯಮ 1999-2000ರ ಪ್ರಕಾರ ಸ್ಟ್ಯಾಂಡರ್ಡ ಟೆಂಡರ್ ಡಾಕ್ಯೂಮೆಂಟ್ಸ್ ನಿಯಮದನ್ವಯ ಸನ್ 2026-27ನೇ ಸಾಲಿನ ನಗರಸಭೆ ಅನುದಾನದಲ್ಲಿ ಕಾಮಗಾರಿ ನಿರ್ವಹಿಸಬೇಕಾಗಿದ್ದು, ಅಂದಾಜು ಪತ್ರಿಕೆ ಮೊತ್ತ **ರೂ.15.58 ಲಕ್ಷ**ಗಳಿಗೆ ಒಟ್ಟು 04 ಕಾಮಗಾರಿಗಳಿಗೆ ಟೆಂಡರ್ ದರಗಳನ್ನು ಆಹ್ವಾನಿಸಿದ್ದು, ಖಾಲಿ ಟೆಂಡರ್ ಫಾರ್ಮ ಫೀ 1000.00+18% ಜಿ.ಎಸ್.ಟಿ. ನಗರಸಭೆಗೆ ಪಾವತಿಸಿ ಖಾಲಿ ಟೆಂಡರ್ ಫಾರ್ಮ ಪಡೆಯುವುದು. ಕಾಮಗಾರಿಯ ಹೆಚ್ಚಿನ ಮಾಹಿತಿ ಬೇಕಾದಲ್ಲಿ ತಾಂತ್ರಿಕ ಶಾಖೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆದು. ಟೆಂಡರ್ ಸಲ್ಲಿಸಬಹುದಾಗಿದೆ.

1) ಖಾಲಿ ಟೆಂಡರ್ ನಮೂನೆಗಾಗಿ ಅರ್ಜಿಯನ್ನು **ದಿನಾಂಕ: 10-08-2026**ರಿಂದ **ದಿನಾಂಕ: 19-08-2026** ರವರೆಗೆ
2) ಅರ್ಜಿ ಫಾರ್ಮ ಪಡೆದು ಟೆಂಡರ್ ಭರ್ತಿ ಮಾಡಿ ಹಾಕುವ **ದಿನಾಂಕ: 20-08-2026 ಸಂಜೆ 4-00 ಗಂಟೆ** ಒಳಗಾಗಿ
3) ಟೆಂಡರ್ ತೆರೆಯುವ **ದಿನಾಂಕ: 20-08-2026 ಸಂಜೆ 4-30 ಗಂಟೆಗೆ**
4) ಹೆಚ್ಚಿನ ಮಾಹಿತಿ ಬೇಕಾದಲ್ಲಿ ಪಿ.ಡಬ್ಲ್ಯೂ.ಡಿ. ವಿಭಾಗದಲ್ಲಿ ಕೇಳಿ ಪಡೆಯಬಹುದು.

ಸಹಿ/- ಪೌರಾಯುಕ್ತರು
ಗದಗ-ಬೆಟಗೇರಿ ನಗರಸಭೆ

ವಾ.ಸಾ.ಸಂ.ಇ/ಗದಗ/194/ದೇಶಪಾಂಡೆಪಬ್ಲಿಸಿಟಿ/2026-27

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka